ಸಂಪುಟ 01 । ಸಂಚಿಕೆ 77 । ಗುರುವಾರ 29 ಜನವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಭಾರತೀಯ ವೃತ್ತಪತ್ರಿಕೆ ದಿನ Indian Newspaper Day

ಭಾರತದಲ್ಲಿ ವೃತ್ತಪತ್ರಿಕೆಗಳ ಆರಂಭವನ್ನು ಗೌರವಿಸಲು ನಿಗದಿಪಡಿಸಿದ ದಿನವನ್ನು ಭಾರತೀಯ ವೃತ್ತಪತ್ರಿಕೆ ದಿನ ಎಂದು ಕರೆಯಲಾಗುತ್ತದೆ. ಈ ದಿನವನ್ನು ಭಾರತೀಯ ವೃತ್ತಪತ್ರಿಕೆಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶವನ್ನು ಹೊಂದಿದೆ. ಪ್ರತಿ ವರ್ಷ ಜನವರಿ 29 ರಂದು ಆಚರಿಸಲಾಗುವ ಭಾರತೀಯ ವೃತ್ತಪತ್ರಿಕೆ ದಿನ ಇಂದು. ಆದಾಗ್ಯೂ, ಈ ಮಹತ್ವದ ಸಂದರ್ಭವನ್ನು ಆಚರಿಸಲು ಯಾವುದೇ ವಿಷಯವಿಲ್ಲ.

## ಸುಭಾಷಿತ

ನಿತ್ಯ, ಅನಿತ್ಯ ವಸ್ತುಗಳನ್ನು ವಿಮರ್ಶಿಸಿ
ಸತ್ಯವನ್ನು ಕಂಡುಹಿಡಿಯುವುದೇ
ವಿವೇಕ.

-ರಾಮಕೃಷ್ಣ ಪರಮಹಂಸ

ನೈಜ್ಯದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಸುದ್ದಿ ಹಾಗೂ ಜಾಹಿರಾತಿಗಾಗಿ ಸಂಪರ್ಕಿಸಿ
9902277588, 9880707587, 9008787586

# ಫೆ.7ರಂದು ರಾಯಚೂರು ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ; ಯಶಸ್ವಿಗೊಳಿಸಲು ಸಮಿತಿಯ ಅಧ್ಯಕ್ಷ ಪಾಮಯ್ಯ ಮುರಾರಿ ಸೂಚನೆ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು ಜನವರಿ 28 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಫೆ.05 ರಿಂದ ಫೆ.07ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರಲ್ಲಿ ಫೆ.07ರಂದು ಹಮ್ಮಿಕೊಂಡ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ ಕಾರ್ಯಕ್ರಮವು ಯಶಸ್ವಿಯಾಗಿ ನಡೆಯುವಂತೆ ಗ್ಯಾರಂಟಿ ಯೋಜನೆಗೆ ಸಂಬಂಧಿಸಿದ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಹೇಳಿದರು.ಜನವರಿ 28ರ ಬುಧವಾರ ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಸಮಾವೇಶದ ಸಿದ್ಧತೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು, ಜಿಲೆಯ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷರು, ಜಿಲೆಯ ಎಲ್ಲ ಜನಪ್ರತಿನಿಧಿಗಳು ಸೇರಿದಂತೆ ಜಿಲ್ಲಾ ಹಾಗೂ ರಾಯಚೂರು, ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ದೇವದುರ್ಗ, ಸಿರವಾರ ಸೇ-ರಿದಂತೆ ವಿವಿಧ ತಾಲೂಕುಗಳ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಭಾಗವಹಿಸಲಿದ್ದಾರೆ. ರಾಯಚೂರು ಜಿಲ್ಲೆ ಮತ್ತು ತಾಲೂಕುವಾರು ವಿವಿಧ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಪ್ರಸ್ತುತ ಅವಧಿವರೆಗೂ ಸಾಧಿಸಿರುವ ಪ್ರಗತಿಯ ವಿವರಗಳ ಮಾಹಿತಿಯನ್ನು ವಿಡಿಯೋ ಸಾಕ್ಷ್ಯಚಿತ್ರಗಳ ಮೂಲಕ ಪ್ರದರ್ಶಿಸುವ ಕಾರ್ಯ ಮಾಡಬೇಕು ಎಂದು ತಿಳಿಸಿದರು.ರಾಯಚೂರು ಜಿಲ್ಲೆಯಲ್ಲಿನ ಗ್ಯಾರಂಟಿ ಯೋಜನೆಯಗಳ ಫಲಾನುಭವಿಗಳ ಯಶೋಗಾಥ-'ಯ ಬಗ್ಗೆ ನಾವು ತಿಳಿದುಕೊಳ್ಳಬೇಕು. ಅದು ಇತರರಿಗೆ ಪ್ರೇರಣೆಯಾಗಬೇಕು. ಮುಖ್ಯವಾಗಿ ಗ್ಯಾರಂಟಿ ಯೋಜನೆಗಳ ಆಶಯ ಮತ್ತು ಆಯಾ ಯೋಜನೆಗಳ ಬಗ್ಗೆ ಜನತೆಗೆ ತಿಳಿಸಲು ಅರ್ಹರು ಈ ಯೋಜನೆಯ ವ್ಯಾಪ್ತಿಗೆ ಬರಬೇಕು ಎನ್ನುವ ಪ್ರಮುಖ ಉದ್ದೇಶದೊಂದಿಗೆ ಫೆ.07ರಂದು ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ ಹಮ್ಮಿಕೊಳ್ಳಲಾಗಿದೆ.ಜಿಲ್ಲೆಯ ವಿವಿಧೆಡೆ ಇರುವ ವಿವಿಧ ಗ್ಯಾರಂಟಿ ಯೋಜನೆಗಳ ಸಾಧಕ ಫಲಾನುಭವಿಗಳನ್ನು ಕೂಡಲೇ ಗುರುತಿಸಬೇಕು. ಪ್ರತಿ ತಾಲೂಕಿನಿಂದ ಕನಿಷ್ಠ 25 ಸಾಧಕ ಮಹಿಳಾ ಫಲಾನುಭವಿಗಳನ್ನು ಗುರುತಿಸಿ ಅವರಿಗೆ ಸಮಾವೇಶಕ್ಕೆ ಆಹ್ವಾನಿಸಿ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸುವ ಕಾರ್ಯ ಮಾಡಬೇಕು. ಈ ಕಾರ್ಯಕ್ಕೆ ಸಂಬಂಧಿಸಿದ ವಿವಿಧ ಇಲಾಖೆಗಳ ಅಧಿಕಾರಿಗಳು ಆದ್ಯತೆ ನೀಡಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಯಶೋಗಾಥೆಯ ಸಾಕ್ಷ್ಯಚಿತ್ರಗಳ ಪ್ರದರ್ಶನದ ಜೊತೆಗೆ ಸಾಧಕ ಫಲಾನುಭವಿಗಳ ಅಭಿಪ್ರಾಯದ ವಿಡಿಯೋ ಪ್ರದರ್ಶಿಸಬೇಕು. ಗ್ಯಾರಂಟಿ ಯೋಜನೆಗಳ ಯಶೋಗಾಥೆಯ ಕುರಿತು ನಾಟಕ ಪ್ರದರ್ಶನ ಸೇ-ರಿದಂತೆ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲು ಅಗತ್ಯ ಕ್ರಮವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.ಜಿಲ್ಲೆಯ ಸ್ವ-ಸಹಾಯ ಗುಂಪುಗಳು ಉತ್ಪಾದಿಸುವ ಉತ್ಪನ್ನಗಳು ಸೇರಿದಂತೆ, ಸ್ಥಳೀಯ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಯೋಜನೆ ಮಾಡಬೇಕೆಂದರು.ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಉಪಾಧ್ಯಕ್ಷರಾದ ಶಂಕರಗೌಡ ತುರ್ವಿಹಾಳ, ಹನುಮಂತಪ್ಪ ಜಾಲಿಬೆಂಚಿ, ಸದಸ್ಯರಾದ ಲಕ್ಷ್ಮಣ ಜ್ಯೋತಿ, ಮೆಹೆಬೂಬ್ ಸಾಬ್, ವೆಂಕಟೇಶ, ಆದನಗೌಡ, ಹೆಚ್.ಬಸವರಾಜ್, ಶೇಖರಪ್ಪ ಯಾದವ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಸಿಡಾಕ್ ಜಂಟಿ ನಿರ್ದೇಶಕ ಜಿ.ಯು.ಹುಡೇದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ಜೆಸ್ಕಾಂ ಇಲಾಖೆಯ ಅಧಿಕಾರಿ ಚಂದ್ರಶೇಖರ ದೇಸಾಯಿ, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಗ ಸೇರಿದಂತೆ ರಾಯಚೂರು, ಮಾನ್ವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಸಿರವಾರ, ಅರಕೇರಾ ಮತ್ತು ದೇವದುರ್ಗ ತಾಲೂಕುಗಳ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಯಲ್ಲಿ ಇದ್ದರು.ಶುಲ್ಕ ಮರುಪಾವತಿಗೆ ತಾಂತ್ರಿಕ ಕಾರಣ ಬಗೆಹರಿಸಲು ಅವಕಾಶ ರಾಯಚೂರು ಜನವರಿ 28 (ಕರ್ನಾಟಕ ವಾರ್ತೆ): ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2020-21, 2021-22, 2022-23,





2023-24, 2024-25 ಮತ್ತು 2025-26ನೇ ಸಾಲಿನ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮಕ್ಕಾಗಿ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಿರುವ ಕೆಲವೊಂದು ವಿದ್ಯಾರ್ಥಿಗಳಿಗೆ ತಾಂತ್ರಿಕ ಕಾರಣಗಳಿಂದ ವಿದ್ಯಾರ್ಥಿವೇತನ ಅಥವಾ ಶುಲ್ಕ ಮರುಪಾವತಿ ಮಾಡಲು ಸಾಧ್ಯವಾಗುತ್ತಿಲ್ಲ.ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಕೊಳ್ಳದೆ ಇರುವುದು. ವಿದ್ಯಾರ್ಥಿಗಳ ಶೈಕ್ಷಣಿಕ ದತ್ತಾಂಶದಲ್ಲಿ ಹಾಗೂ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ನಮೂದಿಸಿರುವ ಹೆಸರಿಗೂ ವ್ಯತ್ಯಾಸವಿರುವುದು. ಕೌನ್ಸೆಲಿಂಗ್ ಕೋರ್ಸ್ಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕೌನ್ಸೆಲಿಂಗ್ ದತ್ತಾಂಶ ನಮೂದಿಸದೇ ಇರುವುದು. ವಿದ್ಯಾರ್ಥಿಗಳ ಹಿಂದಿನ ಶೈಕ್ಷಣಿಕ ವರ್ಷದ ದತ್ತಾಂಶವನ್ನು ವಿಶ್ವವಿದ್ಯಾಲಯಗಳು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದೊಂದಿಗೆ ಹಂಚಿಕೊಳ್ಳದೇ ಇರುವುದು.ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಿ, ಮಾಹಿತಿಯನ್ನು ಅಪ್‌ಡೇಟ್ ಮಾಡಲು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ವಿದ್ಯಾರ್ಥಿಗಳ ಲಾಗಿನ್, ತಾಲ್ಲೂಕು/ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಲಾಗಿನ್‌ನಲ್ಲಿ ಅವಕಾಶ ನೀಡಲಾಗಿರುತ್ತದೆ. ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ತಿಳಿಸಿದೆ. ಒಂದು ವೇಳೆ ದಿನಾಂಕ 30-01-2026ರ ಒಳಗಾಗಿ ವಿದ್ಯಾರ್ಥಿಗಳು ತಮ್ಮ ಮಾಹಿತಿಯನ್ನು ಅಪ್‌ಡೇಟ್ ಮಾಡದೇ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ರಾಯಚೂರು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಸ್ಪರ್ಶ ಕುಷ್ಟರೋಗ ಕಾರ್ಯಕ್ರಮದ ಜಾಗೃತಿ ಅಭಿಯಾನ ತಹಸೀಲ್ದಾರ್ ಅರುಣ್ ದೇಸಾಯಿ.

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು : ಶತ ಶತಮಾನಗಳಿಂದ ಇಂದಿಗೂ ಸಮುದಾಯದಲ್ಲಿರುವ ಕುಷ್ಟರೋಗವನ್ನು ನಿರ್ಮೂಲನೆ ಮಾಡಲು ದೇಹದ ಮೇಲಿನ ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ತಾಮ್ರ ಬಣ್ಣದ ಮಚ್ಚೆಗಳು ಹಾಗೂ ನರ ಮತ್ತು ಚರ್ಮದ ಕಾಯಿಲೆಯಾಗಿದ್ದು ಇದನ್ನು ಮಾತ್ರೆಗಳ ಮೂಲಕ ಸಂಪೂರ್ಣ ಗುಣಪಡಿಸುವುದು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತ ಚಿಕಿತ್ಸೆ ಲಭ್ಯವಿರುತ್ತದೆ ಹೆಚ್ಚಿನ ಜಾಗೃತಿಯನ್ನು ಸಮುದಾಯಕ್ಕೆ ತಲುಪುವಂತೆ ಹೆಚ್ಚು ಹೆಚ್ಚು ಪ್ರಚೂರು ಪಡಿಸಲು ತಾಲೂಕು ದಂಡಾಧಿಕಾರಿಗಳು ತಿಳಿಸಿದರು. ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕುಷ್ಟರೋಗ ನಿರ್ಮೂಲನ ಕಾರ್ಯಕ್ರಮದಡಿ ಜನವರಿ 30 ರಿಂದ ಫೆಬ್ರುವರಿ 13 ರವರೆಗೆ ಕಾರ್ಯಕ್ರಮನಡೆಯಲಿದ್ದು ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನದ ಕುರಿತು ತಾಲೂಕು ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತ ಶಾಪ ದಿಂದ ಬರುತ್ತದೆ ಎಂಬ ತಪ್ಪು ನಂಬಿಕೆಯನ್ನು ಹೋಗಲಾಡಿಸಿ ಇದು ಮೈಕ್ರೋ ಬ್ಯಾಕ್ಟೀ-ರಿಯಾ ಲೆಪ್ರೆ ಎಂಬ ಸೂಕ್ಷ್ಮಾಣು ಜೀವಿಯಿಂದ ಬರುವ ಹಾಗೂ ಕಾಯಿಲೆ ಹೊಂದಿದ ವ್ಯಕ್ತಿ ಕೆಮ್ಮಿದಾಗ ಸೀನಿದಾಗ ಬ್ಯಾಕ್ಟೀರಿಯಾವು ಉಸಿರಿನ ಮೂಲಕ ಜೊತೆಯಾಗಿರುವವರಿಗೆ ದೀರ್ಘಾವಧಿಯಲ್ಲಿ ಬರುವ ಕಾಯಿಲೆಯಾಗಿದೆ. ಸ್ಪರ್ಶ ವಿಲ್ಲದ ಮಚ್ಚೆಗಳು ಕಂಡು ಬಂದರೆ ತಕ್ಷಣವೇ ವೈದ್ಯರ ಬಳಿ ಪರೀಕ್ಷೆ ಮಾಡಿಸಿ ಖಚಿತಪಡಿಸಿಕೊಳ್ಳಿ ದೇಹದ ಮೇಲಿನ ಮಚ್ಚೆಗಳ ಆಧಾರದ ಮೇಲೆ ಆರು ತಿಂಗಳಿನಿಂದ ಒಂದು ವರ್ಷ ಉಚಿತವಾದ ಚಿಕಿತ್ಸೆಯೊಂದಿಗೆ



ಸಂಪೂರ್ಣ ವಾಸಿಯಾಗುತ್ತದೆ ಎಂಬುದನ್ನು ಮನವರಿಕೆ ಮಾಡಿ ಎಂದರು ನಂತರ ಬೇರೆ ಬೇರೆ ಇಲಾಖೆಯ ಸಹಯೋಗದಲ್ಲಿ ಗ್ರಾಮಗಳಲ್ಲಿ, ಶಾಲೆಗಳಲ್ಲಿ ಮಕ್ಕಳಿಗೆ, ಗ್ರಾಮ ಪಂಚಾಯತ್ ಸದಸ್ಯರಿಗೆ ಸ್ತ್ರೀಶಕ್ತಿ ಸಂಘ ಯುವಕ ಯುವತಿ ಸಂಘ ವಿವಿಧ ಸಂಸ್ಥೆಗಳ ಸದಸ್ಯರಿಗೆ ಹೆಚ್ಚಿನ ಜಾಗೃತಿ ನೀಡಿ ಎಂದ ತಿಸಿದರು. ಭೀತ್ತಿಪತ್ರ(ಪೋಸ್ಟರ್ )ಗಳನ್ನು ಬಿಡುಗಡೆಗೊಳಿಸಿ ಅತಿ ಹೆಚ್ಚು ಪ್ರಚಾರ ಮಾಡಿ ಎಂದು ತಿಳಿಸಿದರು. ನಂತರ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಅಯ್ಯನ್ ಗೌಡ ರವರು ಮಾತನಾಡಿ ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನದಲ್ಲಿ ದೇಹದ ಮೇಲೆ ಸ್ಪರ್ಶಜ್ಞಾನವಿಲ್ಲದ ತಿಳಿ ಬಿಳಿ ತಾಮ್ರ ವರ್ಣದ ಮಚ್ಚೆ ಗಳೆನಾದರೂ ಇದ್ದರೆ, ವೈದ್ಯರನ್ನು ಸಂಪರ್ಕ ಮಾಡಬೇಕು ಎಂದು ಹೇಳಿದರು ನಂತರ ಸ್ಪರ್ಶ ಜ್ಞಾನವಿಲ್ಲದ, ಬೆವರದೇ ಇರುವುದು, ಈ ರೋಗವು ಮುಖ್ಯವಾಗಿ ಚರ್ಮ ಹಾಗೂ ನರಗಳಿಗೆ ಸಂಬಂಧಿಸಿರುತ್ತದೆ, ಈ ರೋಗವು ಬಡವರು ಶ್ರೀಮಂತರು ಗಂಡು ಹೆಣ್ಣು ಎಂಬ ಭೇದ ಭಾವವಿಲ್ಲದೆ ಯಾರಿಗಾದರೂ ಬರಬಹುದು ರೋಗವನ್ನು ಪ್ರಾರಂಭದ ಲಕ್ಷಣಗಳಿದ್ದಾಗ ಕಂಡುಹಿಡಿದು ಚಿಕಿತ್ಸೆಗೆ ಒಳಪಡಿಸಿದರೆ ಅಂಗವಿಕಲತೆ ಆಗುವುದಿಲ್ಲ ಗುಣಮುಖ ಹೊಂದಿದ ಅಂಗವಿಕಲ ಕುಷ್ಟರೋಗಗಳನ್ನು ಆರ್‌ಸಿ-ಎಸ್(ಖಅಖ) ಚಿಕಿತ್ಸೆಯಿಂದ ಸರಿಪಡಿಸಲಾಗುವುದು ಕುಷ್ಟರೋಗವನ್ನು ಬಹು ಔಷಧೀಯ ಚಿಕಿತ್ಸೆಯು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ತೆರೆಯುತ್ತದೆ ಕ್ರಮಬದ್ಧವಾದ ಚಿಕಿತ್ಸೆ ಮತ್ತು ಸ್ವಯಂ ಆರೈಕೆಯಿಂದ ಅಂಗವಿಕಲತೆಯನ್ನು ತಡೆಗಟ್ಟಬಹುದು ಕುಷ್ಟರೋಗ ನಿರ್ಮೂಲನೆಯಲ್ಲಿ ಸಮಾಜ ಪಾತ್ರ ಮುಖ್ಯವಾಗಿರುತ್ತದೆ , ಕುಷ್ಟರೋಗದ ಬಗ್ಗೆ ವೈಜ್ಞಾನಿಕ ಸತ್ಯ ಸಂಗತಿಗಳನ್ನು ತಿಳಿದುಕೊಂಡು ಬೇರೆಯವರಿಗೆ ತಿಳಿಸುವುದು ಕುಷ್ಟರೋಗದ ಲಕ್ಷಣಗಳಿದ್ದರೆ ಗುರುತಿಸಿ ಸಮೀಪದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಗೆ ಒಳಪಡಿಸುವುದು ಈ ರೋಗವನ್ನು ನಿರ್ಮೂಲನೆ ಮಾಡಲು ಜಾಗತಿಕ ಆರೋಗ್ಯ ಸಂಸ್ಥೆ ಹಾಕಿಕೊಂಡು ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವುದು ಕುಷ್ಟರೋಗ ಮುಕ್ತ ದೇಶವನ್ನಾಗಿಸುವ ಮಹಾತ್ಮ ಗಾಂಧೀಜಿಯವರ ಕನಸನ್ನು ನನಸಾಗಿಸುವುದು ಕುಷ್ಟರೋಗ ನಿರ್ಮೂಲನೆಗಾಗಿ ಸೇವೆ ಸಲ್ಲಿಸಿದ ಬಾಬಾ ಆ ಮಟೆ, ಮದರ್ ತೆರೆಸಾ, ಹಾಗೂ ಇತರರಂತೆ ನಾವು ನಮ್ಮ ಅಳಿಲುಸೇವೆ ಸಲ್ಲಿಸುವುದು ಎಂದು ಕುಷ್ಠ ರೋಗಿಗಳಿಗೆ ಸಮುದಾಯದಲ್ಲಿ ಪ್ರೀತಿ ವಾತ್ಸಲ್ಯ ಬೇಕು ಕುಷ್ಟರೋಗಕ್ಕೆ ತುತ್ತಾದ ವ್ಯಕ್ತಿ ಸಮಾಜಕ್ಕೆ ಬೇಕಾದ ವ್ಯಕ್ತಿ ಎಂದು ಒಪ್ಪಿಕೊಂಡು ಗೌರವದಿಂದ ಬಾಳಲು ಸಹಕರಿಸಬೇಕು ಎಂದು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಸದರಿ ಕಾರ್ಯಕ್ರಮದಲ್ಲಿ ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು ಚಂದ್ರಶೇಖರ್ ಅಧಿಕಾರಿಗಳು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸಿಂಧನೂರ್, ಲಿಂಗನಗೌಡರು ಶಿಶು ಅಭಿವೃದ್ಧಿ ಅಧಿಕಾ-ರಿಗಳು ಸಿಂಧನೂರ್, ನಗರ ಸಭೆ ಪೌರಾಯುಕ್ತರು ಪಾಂಡುರಂಗ ಇಟಗಿ, ಬಸಲಿಂಗಪ್ಪ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಅಮರ ಗುಂಡಪ್ಪ ಂಆ, ಐ ಆ ಅಂಗಡಿ ಸಮಾಜ ಕಲ್ಯಾಣ್ ಅಧಿಕಾರಿಗಳು ಸಿಂಧನೂರು ಉಪಸ್ಥಿತರಿದ್ದರು.

# ರಾಯಚೂರು ಉತ್ಸವದ ಕಾರ್ಯಕ್ಕೆ ನಾವೂ ಕೈ ಜೋಡಿಸುತ್ತೇವೆ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು ಜನವರಿ 28 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾ ಉತ್ಸವದ ನೂತನ ವಿವಿಧ ಸಮಿತಿಗಳ ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿಗಳು ಮತ್ತು ಸದಸ್ಯರ ಹಾಗೂ ಸಮನ್ವಯ ಅಧಿಕಾರಿಗಳ ಸಭೆಯು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 28ರಂದು ನಡೆಯಿತು.ಈ ಸಭೆಯಲ್ಲಿ ಭಾಗಿಯಾಗಿದ್ದ ಹಿರಿಯ ರೈತ ಮುಖಂಡರಾದ ಚಾಮರಸ ಪಾಟೀಲ, ಕರ್ನಾಟಕ ಸಂಘದ ಅಧ್ಯಕ್ಷರಾದ ಕೆ.ಶಾಂತಪ್ಪ, ಹೋರಾಟಗಾರರಾದ ಬಸವರಾಜ ಕಳಸ ಸೇ-ರಿದಂತೆ ಇನ್ನಿತರರು ಮಾತನಾಡಿ, ರಾಯಚೂರು ಜಿಲ್ಲಾ ಉತ್ಸವದ ಮೊದಲನೇ ಸಾರ್ವಜನಿಕ ಸಭೆಯಲ್ಲಿ ಕೇಳಿ ಬಂದ ಬಲವಾದ ಅಭಿಪ್ರಾಯದಂತೆ ಜಿಲ್ಲಾಡಳಿತವು ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಗಣ್ಯರು ಮತ್ತು ಇನ್ನಿತರ ಮಹನಿಯರ ಒಳಗೊಂಡು ಹೊಸ ಸಮಿತಿಗಳನ್ನು ರಚಿಸಿದ್ದು ಅತ್ಯಂತ ಸ್ವಾಗತಾರ್ಹ ಕ್ರಮವಾಗಿದೆ. ಈ ಸಮಿತಿಯ ಸದಸ್ಯರಾದ ನಾವು ಉತ್ಸವದ ಕಾರ್ಯದಲ್ಲಿ ಭಾಗಿಯಾಗುತ್ತೇವೆ. ಈ ಸಮಿತಿಗಳಲ್ಲಿನ ಅಧಿಕಾರಿಗಳು ನಮ್ಮೆಲ್ಲರನ್ನು ವಿಶ್ವಾಸಕ್ಕೆ ಪಡೆದು ಕಾರ್ಯನಿರ್ವಹಿಸಬೇಕು ಎಂದು ಅಭಿಪ್ರಾಯಪಟ್ಟರು.ಸಭೆಯಲ್ಲಿ





ಮೊದಲಿಗೆ ವಿವಿಧ ಸಮಿತಿಗಳಲ್ಲಿ ಸದಸ್ಯರು ಉತ್ಸವದ ಕು-ರಿತು ನಾನಾ ಸಲಹೆ ನೀಡಿದರು. ರಾಯಚೂರು ಉತ್ಸವದ ನಿಮಿತ್ತ ಜಿಲ್ಲಾಡಳಿತವು ಜ್ಯೋತಿ ರಥಯಾತ್ರೆ ಕಾರ್ಯಕ್ರಮ ಹಮ್ಮಿಕೊಂಡಿದ್ದು ಉತ್ತಮ ಪ್ರಯತ್ನವಾಗಿದೆ. ಈ ಕಾರ್ಯಕ್ರಮದಲ್ಲಿ ಶಾಲಾ ಕಾಲೇಜಿನ ವಿದ್ಯಾರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸೇ-ರಿಸಬೇಕು ಎಂದು ಕರ್ನಾಟಕ ಸಂಘದ ಕೆ.ಶಾಂತಪ್ಪ ಅವರು ಸಲಹೆ ಮಾಡಿದರು.ಉತ್ಸವದಲ್ಲಿ ಪ್ಲಾಸ್ಟಿಕ್ ಬಳಕೆ ಮಾಡಬಾರದು ಎಂದು ರೈತ ಸಂಘದ ಮುಖಂಡರದ ಅನಿತಾ ಅವರು ಸಲಹೆ ಮಾಡಿದರು. ರಸ್ತೆಗಳಲ್ಲಿ ಅಳವಡಿಸಿದ ಅಲಂಕೃತ ಬಟ್ಟೆಯನ್ನು ಸರಿಪಡಿಸಬೇಕು ಎಂದು ಕನ್ನಡಪರ ಸಂಘಟನೆಯ ಅಶೋಕ ಜೈನ್ ಅವರು ತಿಳಿಸಿದರು.ಉತ್ಸವಕ್ಕೆ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳ ಸಹಕಾರ ಪಡೆದುಕೊಳ್ಳಲು ಹೊಸ ಸಮಿತಿಗಳನ್ನು ರಚಿಸಿದ್ದು ಅತ್ಯಂತ ಸ್ವಾಗತಾರ್ಹ ಕ್ರಮವಾಗಿದೆ. ಈ ಸಮಿತಿಗಳಲ್ಲಿನ ಅಧಿಕಾರಿಗಳು ನಮಗೆ ಸಂಪರ್ಕಿಸಿ ಆಯಾ ಸಮಿತಿಗಳ ಹಂತದಲ್ಲಿ ಮೇಲಿಂದ ಮೇಲೆ ಸಭೆಗಳು ನಡೆದು ಕೆಲಸ ಹಂಚಿಕೆ ಕಾರ್ಯವಾಗಬೇಕು ಎಂದು ಮರಮಾರಿ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಹುಸೇನ್ ಅವರು ಸಲಹೆ ಮಾಡಿದರು.ಉತ್ಸವದಲ್ಲಿ ಬಹಳಷ್ಟು ಜನರು ಸೇರಲಿದ್ದು ಸಾಮಾನ್ಯ ಜನರು ಸಹ ಖರೀದಿಸಿ ಉಪಹಾರ ಊಟ ಮಾಡಲು ಅನುಕೂಲವಾಗುವಂತೆ ಕಡಿಮೆ ದರವನ್ನು ನಿಗದಿಪಡಿಸಬೇಕು ಎಂದು ಮುಖಂಡರಾದ ವಸಂತಕುಮಾರ ಅವರು ಸಭೆಗೆ ಸಲಹೆ ಮಾಡಿದರು.ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳ ಬ್ಯಾನರ್ ಸಹ ಉತ್ಸವದಲ್ಲಿ ಅಳವಡಿಸಿ ಜನತೆಗೆ ಸ್ವಾಗತ ಕೋರಲು ಅನುವು ಮಾಡಿಕೊಡಬೇಕು ಎಂದು ರವಿ ಜಲ್ದಾರ ಅವರು ತಿಳಿಸಿದರು.ಉತ್ಸವದಲ್ಲಿ ಭಾಗಿಯಾಗುವ ಜನತೆಗೆ ಆರೋಗ್ಯದಲ್ಲಿ ಏನಾದರು ಏರುಪೇರುಗಳಾದಲ್ಲಿ ಕೂಡಲೇ ಚಿಕಿತ್ಸೆ ಸಿಗುವ ಹಾಗೆ ಉತ್ಸವದ ವಿವಿಧ ಸ್ಥಳದಲ್ಲಿ ತಾತ್ಕಾಲಿಕ ಚಿಕಿತ್ಸಾ ಕೇಂದ್ರಗಳನ್ನು ತೆರೆಯಬೇಕು ಎಂದು ಶಶಿಕಲಾ ಭೀಮರಾಯ ಅವರು ಸಲಹೆ ಮಾಡಿದರು.ಗ್ರಾಮೀಣ ಭಾಗದಲ್ಲಿನ ಜನತೆಗೂ ಉತ್ಸವದ ಮಾಹಿತಿ ದೊರಕಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ಗ್ರಾಮಗಳ ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಉತ್ಸವದ ಬ್ಯಾನರ್ ಅಳವಡಿಸಿ ಪ್ರಚಾರ ನಡೆಸಬೇಕು ಎಂದು ಶ್ರೀದೇವಿ ನಾಯಕ ಅವರು ಸಲಹೆ ಮಾಡಿದರು.ಜಿಲ್ಲಾಧಿಕಾ-ರಿಗಳಾದ ನಿತೀಶ್ ಕೆ. ಅವರು ಮಾತನಾಡಿ, ರಾಯಚೂರು ಜಿಲ್ಲಾ ಉತ್ಸವಕ್ಕೆ ಜಿಲ್ಲೆಯ ಎಲ್ಲ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಇನ್ನಿತರರು ಕೈಜೋಡಿಸಿ ಸಹಕಾರ ನೀಡಬೇಕು. ಉತ್ಸವದ ಸಿದ್ಧತೆಯು ಈಗಾಗಲೇ ಶೇ.80ರಷ್ಟು ಪೂರ್ಣವಾಗಿದೆ. ಸಾರ್ವಜನಿಕರೊಂದಿಗೆ ನಡೆಸಿದ ಮೊದಲನೇ ಸಭೆಯಲ್ಲಿ ಕೇಳಿ ಬಂದ ಎಲ್ಲ ಸಲಹೆಗಳನ್ನು ನಾವು ಪರಿಗಣಿಸಿ ಕಾರ್ಯಗತ ಮಾಡಿದ್ದೇವೆ. ಈಗ ಉತ್ಸವಕ್ಕೆ ವಾರದ ಸಮಯವಷ್ಟೇ ಉಳಿದಿದೆ. ಸಂಘ ಸಂಸ್ಥೆಗಳ ಪ್ರತಿನಿಧಿಗಳು, ನಾಗರಿಕರು, ಗಣ್ಯರು, ಬುದ್ಧಿ ಜೀವಿಗಳು, ಸಾಹಿತಿಗಳು, ಕಲಾವಿದರು ಮತ್ತು ಇನ್ನೀತರ ಬೇರೆ ಬೇರೆ ವರ್ಗದವನ್ನು ಉತ್ಸವದ ವಿವಿಧೆ ಸಮಿತಿಗೆ ಸೇರಿಸಿದ್ದೇವೆ. ಆಯಾ ಸಮಿತಿಗಳಲ್ಲಿನ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು ಹಾಗೂ ಸಮನ್ವಯ ಅಧಿಕಾರಿಗಳು ತಮ್ಮ ಹಂತದಲ್ಲಿ ಸಭೆ ಕರೆದು ಚರ್ಚಿಸಿ ಉತ್ಸವದ ಬೇರೆ ಬೇರೆ ಕಾರ್ಯಗಳ ಹಂಚಿಕೆ ಮಾಡಿಕೊಂಡು ಉತ್ಸವದ ಯಶಸ್ವಿಗೆ ಸಹಕಾರ ನೀಡಬೇಕು ಎಂದು ಕೋರಿದರು.ಜನರ ಸುರಕ್ಷತೆಗಾಗಿ ಕ್ರಮ: ಉತ್ಸವದಲ್ಲಿ ಯಾವುದೇ ರೀತಿಯಲ್ಲಿ ಕಳ್ಳತನಗಳು ಆಗದಂತೆ ಮತ್ತು ಅವಘಡಗಳು ನಡೆಯದಂತೆ ನೋಡಿಕೊಳ್ಳಲು ಮುಂಜಾಗ್ರತಾ ಕ್ರಮವಾಗಿ ನಗರದ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಅಳವಡಿಕೆ ಕಾರ್ಯ ನಡೆದಿದೆ ಎಂದು ರಾಯಚೂರು ಡಿವೈಎಸ್ಪಿ ಶಾಂತಮೂರ್ತಿ ಅವರು ಸಭೆಗೆ ಮಾಹಿತಿ ನೀಡಿದರು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಲಿಂಗಸುಗೂರು ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾ-ರಿಗಳು, ವಿವಿಧ ಸಂಘ-ಸಂಸ್ಥೆಗಳ ಮುಖಂಡರು ಇದ್ದರು.

## ಸಾಹಿತ್ಯ ಸಿಂಚನ

ಅರಳಿದ ಮೊಗ್ಗಿನ ಚೆಲುವು
ಭಾವನೆಯ ಕರೆಸಿತೇ ಮತ್ತೆ
ಅರಿಯದ ಮನದ ಒಲವು
ಕಾವ್ಯವ ಬೆರೆಸಿತೇ ಮತ್ತೆ

ನೊಂದ ಹೃದಯದಲ್ಲಿ ಭರವಸೆಯ
ಚೈತನ್ಯ ಹುಟ್ಟಿತಲ್ಲವೇ
ನೋವುಗಳ ಮರೆಮಾಚಿ ನಗುವ
ನವಿರಾಗಿ ಎರೆಸಿತೇ ಮತ್ತೆ

ಕಾಲಚಕ್ರ ಉರುಳಿದಂತೆ ಅಳುಕು
ಮಾಯವಾಗಿ ಹೊಸತ ಕಂಡಿತು
ಕಾಂಚಣದ ಮೋಹ ಕರಗಿ ನೆನೆದ
ಪ್ರೀತಿ ಮೆರೆಸಿತೇ ಮತ್ತೆ

ತಳುಕು ಬಳುಕಿನ ಜಗದಲ್ಲಿ ವಂಚನೆ
ಮುಖವಾಡ ಬೇಗ ಕಳಚಿತು
ತಮಂಧ ಕಳೆದು ಬಾಳಲಿ ಬೆಳಕು
ಖುಷಿಯ ತೆರೆಸಿತೇ ಮತ್ತೆ

ಸದ್ದಿಲ್ಲದೆ ಕವಿಯ ಅನುರಾಗದ
ಅನುಬಂಧ ಬೆಸೆದುಕೊಂಡಿತು
ಎದೆಯಲ್ಲಿ ಉಳಿದ ಮಾತುಗಳು
ಕವಿತೆಯ ಬರೆಸಿತೇ ಮತ್ತೆ

ಶ್ರೀಮತಿ ಕವಿತಾ ಹಿರೇಮಠ
ಕವಿತಾಳ

## ಮಾವನಿಂದಲೇ ಗರ್ಭಿಣಿ ಸೊಸೆಯ ಭೀಕರ ಹತ್ಯೆ

❑ ನೈಜ್ಯ ದೆಸೆ ನ್ಯೂಸ್

ಕವಿತಾಳ: ಪಟ್ಟಣ ಸಮೀಪದ ಹಿರೇಹಣಗಿ ಗ್ರಾಮದಲ್ಲಿ ಮಾನವೀಯತೆ ಮರೆತು ಹೋದ ಭೀಕರ ಘಟನೆಯೊಂದು ಇಂದು ಬೆಳಕಿಗೆ ಬಂದಿದೆ. ರೇಖಾ @ ರೇಖಾ ನಾಯಕ್ (24) ಎಂಬ ಗರ್ಭಿಣಿ ಮಹಿಳೆಯನ್ನು ಆಕೆಯ ಮಾವ ಸಿದ್ದಪ್ಪ ನಾಯಕ್ ಕುಡುಗೋಲಿನಿಂದ ಕುತ್ತಿಗೆ ಕೊಯ್ದು ಹತ್ಯೆ ಮಾಡಿದ ಘಟನೆ ನಡೆದಿದ್ದು, ಗ್ರಾಮದಲ್ಲಿ ಆತಂಕ ಮೂಡಿಸಿದೆ. ಮೃತ ರೇಖಾ ಅವರ ವಿವಾಹವು ಸುಮಾರು ಐದು ವರ್ಷಗಳ ಹಿಂದೆ ಚಿಕ್ಕಹಣಗಿ ಗ್ರಾಮದ ನಾಗರಾಜ್ ನಾಯಕ್ ಎಂಬವರೊಂದಿಗೆ ನಡೆದಿತ್ತು. ದಂಪತಿಗೆ ಇದುವರೆಗೂ ಮಕ್ಕಳಾಗಿರಲಿಲ್ಲ. ಈ ಹಿನ್ನೆಲೆಯಲ್ಲಿ ರೇಖಾ ಅವರು ಇತ್ತೀಚೆಗೆ ಮೂರು ತಿಂಗಳ ಗರ್ಭಿಣಿಯಾಗಿದ್ದು, ಕೆಲ ದಿನಗಳ ಹಿಂದೆ ತವರು ಮನೆಗೆ ಬಂದಿದ್ದರು ಎಂದು ತಿಳಿದುಬಂದಿದೆ.ಇಂದು ಬೆಳಿಗ್ಗೆ ಆರೋಪಿ ಸಿದ್ದಪ್ಪ ನಾಯಕ್ ರೇಖಾ ಅವರ ತವರು ಮನೆಗೆ ಬಂದು, ಯಾವುದೋ ವೈಯಕ್ತಿಕ ಕಾರಣಕ್ಕೆ ಕೋಪಗೊಂಡು ಕುಡುಗೋಲಿನಿಂದ ಕುತ್ತಿಗೆ ಮೇಲೆ ಹಲ್ಲೆ ನಡೆಸಿ ಸ್ಥಳದಲ್ಲೇ ಹತ್ಯೆ ಮಾಡಿದ್ದಾನೆ ಎಂದು ಪ್ರಾಥಮಿಕ ಮಾಹಿತಿ ತಿಳಿಸುತ್ತದೆ.ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಡಿವೈಎಸ್‌ಪಿ ಚಂದ್ರಶೇಖರ, ಸಿಪಿಐ ಶಶಿಕಾಂತ ಹಾಗೂ ಪಿಎಸ್‌ಐ ಗುರುಚಂದ್ರ ಯಾದವ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕವಿತಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ಆರೋಪಿಯಾದ ಸಿದ್ದಪ್ಪ ನಾಯಕ್ ಅವರನ್ನು ಪೊಲೀಸರು ಬಂಧಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.ಈ ಘಟನೆ ಗ್ರಾಮದಲ್ಲಿ ಶೋಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದ್ದು, ಗರ್ಭಿಣಿ ಮಹಿಳೆಯ ಮೇಲಿನ ಈ ಅಮಾನವೀಯ ಕೃತ್ಯವನ್ನು ಸಾರ್ವಜನಿಕರು ತೀವ್ರವಾಗಿ ಖಂಡಿಸಿದ್ದಾರೆ.

## ಮಾದರಿ ಭಾರತ ಸಂವಿಧಾನ –ಪತ್ರಕರ್ತ ಚಂದ್ರಶೇಖರ ಯರದಿಹಾಳ




❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು : ಭಾರತದ ಸಂವಿಧಾನ ವಿಶ್ವಕ್ಕೆ ಮಾದರಿಯಾಗಿದೆ, ಅಂತಹ ಸವಿಧಾನವನ್ನು ರಚಿಸಿದ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುವ ಕೆಲಸ ಪ್ರತಿಯೊಬ್ಬರಿಂದ ಆಗಬೇಕು ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಕಾರ್ಯಕಾರಿ ಮಂಡಳಿಯ ಸದಸ್ಯ ಚಂದ್ರಶೇಖರ ಯರದಿಹಾಳ ಹೇಳಿದರು ಅವರು ನಗರದ ಕೋಟೆ ಬಡಾವಣೆಯಲ್ಲಿ ಇರುವ ಸೌದಾಗರ್ ಶಾಲೆಯಲ್ಲಿ 77 ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸೋಮವಾರ ಮಾತನಾಡಿದರು 26 ನೇ ಜನವರಿ 1950 ರಂದು ಭಾರತವು ಸಂವಿಧಾನವನ್ನು ಅಂಗೀಕರಿಸಿದ, ಗಣರಾಜ್ಯೋತ್ಸವ ದಿನ ಇಂದು ಆಗಿದೆ, ಪ್ರತಿಯೊಬ್ಬರು ಸಂವಿಧಾನವನ್ನು ಗೌರವಿಸೋಣ ಕಾನೂನು ಅಡಿಯಲ್ಲಿ ಪ್ರತಿಯೊಬ್ಬರು ಕಾರ್ಯನಿರ್ವಹಿಸುವ ಕೆಲಸ ಆಗಬೇಕು ಮತ್ತು ದೇಶದ ಸಂಸ್ಕೃತಿಯನ್ನು ಎತ್ತಿಡುವ ಕೆಲಸ ಆಗಬೇಕು ಎಂದರು.ಸಾಹಿತಿ ವೆಂಕಣ್ಣ ಆಚಾರ್ಯ ಜೋಶಿ ಮಾತನಾಡಿ ದೇಶದ ಮಹಾತ್ಮರನ್ನು ನೆನಪಿಸಿಕೊಳ್ಳುವ ಕೆಲಸ ಇಂದಿನ ಯುವಕ–ರಿಂದ ಆಗಬೇಕು, ಆಗ ಮಾತ್ರ ದೇಶದ ಬಗ್ಗೆ ಮತ್ತಷ್ಟು ಜಾಗೃತರಾಗಲು ಸಾಧ್ಯವಾಗುತ್ತದೆ ಎಂದರು.

ಯೋಗ ಗುರು ಎಂ.ಭಾಸ್ಕರ್ ಮಾತನಾಡಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಆದರ್ಶ, ತತ್ವಸಿದ್ಧಾಂತಗಳನ್ನು ಪಾಲನೆ ಮಾಡಬೇಕು ಆಗ ಮಾತ್ರ ಜೀವನ ಸುಂದರವಾಗಲು ಸಾಧ್ಯವಾಗುತ್ತದೆ, ಯುವಕರು ಆರೋಗ್ಯದ ಕಡೆ ಹೆಚ್ಚು ಹೆಚ್ಚು ಗಮನವಿಸುವ ಕೆಲಸ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಸೌದಾಗರ್ ಸಂಸ್ಥೆಯ ಅಧ್ಯಕ್ಷ ಅಸಾದ್ ಖಾನ್, ಬಾಬರ್ ಸಾಬ್, ಶಿಕ್ಷಕ ರಾಜಣ್ಣ ಸೇರಿದಂತೆ ಇತರರು ಇದ್ದರು.

# ಪ್ಯಾರಾ ಮೆಡಿಕಲ್ ವಿದ್ಯಾರ್ಥಿನಿ ಝಕಿಯಾ ಮುಲ್ಲಾ ಅವರಿಗೆ ಮೇಣದ ಬತ್ತಿ ಬೆಳಗಿಸಿ ಶ್ರದ್ಧಾಂಜಲಿ



❑ ನೈಜ್ಯ ದೆಸೆ ನ್ಯೂಸ್

ಲಿಂಗಸೂರು: ದಿನಾಂಕ: 20/01/2026 ರಂದು ಹತ್ಯೆಯಾದ ಧಾರವಾಡ ನಗರ ನಿವಾಸಿಯಾಗಿರುವ ಪ್ಯಾರಾ ಮೆಡಿಕಲ್ ವಿದ್ಯಾರ್ಥಿನಿ ಝಕಿಯಾ ಮುಲ್ಲಾರ ಕೊಲೆ ಇಡೀ ಸಮಾಜದ ಮಾನವ ಕುಲ ತಲೆ ತಗ್ಗಿಸುವ ಹಾಗೂ ಖಂಡಿಸುವ ಈ ಘಟನೆಗೆ ಸಂಬಂಧಪಟ್ಟಂತೆ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿಯು ತೀವ್ರ ಸಂತಾಪ ಹಾಗೂ ವಿಷಾದ ವ್ಯಕ್ತಪಡಿಸುತ್ತದೆ, ಸದರಿ ಘಟನೆಯಲ್ಲಿ ಹತ್ಯೆಯಾದ ಝಕೀಯ ಮುಲ್ಲಾ–ರಿಗೆ ಇಂದು ಸಾಯಂಕಾಲ 6.30 ಗಂಟೆಗೆ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿವತಿಯಿಂದ ಗಡಿಯಾರ ಚೌಕಿನಲ್ಲಿ ಮೇಣದ ಬತ್ತಿ ಬೆಳಗಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿಯ ಗೌರವ ಅಧ್ಯಕ್ಷರಾದ ಅನ್ಸರ್ ಭಾಯಿ, ಅಧ್ಯಕ್ಷರಾದ ಹುಸೇನ್ ಭಾಷಾ ಕೆ., ಉಪಾಧ್ಯಕ್ಷರಾದ ಮುಸ್ತಫಾ, ಪ್ರಧಾನ ಕಾರ್ಯದರ್ಶಿಯಾದ ಅಮೀನ್ ಭಾಯಿ, ಹಸನ್ ಭಾಯಿ, ಆರಿಫ್, ವಸಿಂ, ಸಲೀಂ, ಅಬ್ದುಲ್ಲ ರಜಾಕ್, ಲಾಲಾ ಸಾಬ್, ಹಜರತ್, ಖಯ್ಯುಮ್, ಯುನುಸ್, ಬಾಬರ್, ಮಹೇಬೂಬ್, ಅಬ್ದುಲ್ಲ ವಹೀದ್ ಇಬ್ರಾಹಿಂ, ಅಬ್ಬಾಸ್, ಇರ್ಫಾನ್, ಹುಸೇನ್, ಅಯ್ಯುಬ್, ವಸಿಂ ಪಾಷಾ, ದಾದಾಪೀರ್ ಹಾಗೂ ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿಯ ಕಾರ್ಯ ಕಾರಿ ಸಮಿತಿಯ ಸದಸ್ಯರು & ಅಂಜುಮನ್ ಕಮಿಟಿಯ ಅಪಾರ ಪ್ರಮಾಣದ ಬೆಂಬಲಿಗರು ಉಪಸ್ಥಿತರಿದ್ದರು

# ತಾಳಿಕೋಟಿ: ಬಾಲಕ ರೆಹಾನ್ ಖಾನ್‌ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಿಂದ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್




ತಾಳಿಕೋಟಿ ಸಮೀಪದ ಕೊಡೆಕಲ್ಲ ಗ್ರಾಮದ ಪೊಲೀಸ್ ಠಾಣೆಯಲ್ಲಿ ಹಿರಿಯ ಪೇದೆಯಾಗಿ ಸೇವೆ ಸಲ್ಲಿಸುತ್ತಿರುವ ಅಯ್ಯುಬ್ ಖಾನ್ ಅವರ ಏಳು ವರ್ಷದ ಪುತ್ರ ಬಾಲಕ ರೆಹಾನ್ ಖಾನ್ ಅವರು ಸೈಡ್ ಸಿಟ್ ಅಪ್ ವಿಭಾಗದಲ್ಲಿ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ದಾಖಲೆ ನಿರ್ಮಿಸಿರುವ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ರೆಹಾನ್ ಖಾನ್ ಅವರನ್ನು ತಮ್ಮ ಕಾರ್ಯಾಲಯಕ್ಕೆ ಆಹ್ವಾನಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ–ರಿಗಳು, "ನಮ್ಮ ಇಲಾಖೆಯ ಸಿಬ್ಬಂದಿಯ ಮಗನಾದ ರೆಹಾನ್ ಖಾನ್ ಅವರ ಈ ಸಾಧನೆ ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ. ಇಂತಹ ಸಣ್ಣ ವಯಸ್ಸಿನಲ್ಲೇ ಶಿಸ್ತು, ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ದಾಖಲೆ ನಿರ್ಮಿಸಿರುವುದು ಶ್ಲಾಘನೀಯ. ಮುಂದಿನ ದಿನಗಳಲ್ಲಿ ಕ್ರೀಡೆ ಮತ್ತು ಜೀವನದ ಎಲ್ಲ ಕ್ಷೇತ್ರಗಳಲ್ಲಿ ಇನ್ನೂ ಹೆಚ್ಚಿನ ಸಾಧನೆಗಳನ್ನು ಮಾಡುವಂತೆ ಹಾರೈಸುತ್ತೇನೆ," ಎಂದು ಹೇಳಿದರು.ಅವರು ಮುಂದುವರಿದು, "ಕ್ರೀಡೆಯ ಜೊತೆಗೆ ಶಿಕ್ಷಣ–ಕ್ಕೂ ಸಮಾನ ಮಹತ್ವ ನೀಡಬೇಕು. ಶೈಕ್ಷಣಿಕ ಪ್ರಗತಿ ಮತ್ತು ದೈಹಿಕ ಸಾಮರ್ಥ್ಯ ಎರಡೂ ಸೇರಿ ಮಗುವಿನ ಸಮಗ್ರ ಬೆಳವಣಿಗೆಗೆ ಸಹಕಾ–ರಿಯಾಗುತ್ತವೆ," ಎಂದು ಬಾಲಕನ ತಂದೆಗೆ ಸಲಹೆ ನೀಡಿದರು.ಈ ಗೌರವ ಸಮಾರಂಭದಲ್ಲಿ ರೆಹಾನ್ ಖಾನ್ ಅವರ ತರಬೇತುದಾರರು, ಇಲಾಖೆಯ ಸಿಬ್ಬಂದಿಗಳು ಹಾಗೂ ಬಾಲಕನ ತಂದೆಯಾದ ಅಯ್ಯುಬ್ ಖಾನ್ ಉಪಸ್ಥಿತ–ರಿದ್ದರು. ಎಲ್ಲರೂ ಬಾಲಕನ ಸಾಧನೆಯನ್ನು ಅಭಿನಂದಿಸಿ, ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಶುಭ ಹಾರೈಸಿದರು.ಬಾಲಕ ರೆಹಾನ್ ಖಾನ್ ಅವರ ಈ ಸಾಧನೆ ತಾಳಿಕೋಟಿ ಹಾಗೂ ಕೊಡೆಕಲ್ಲ ಪ್ರದೇಶದ ಮಕ್ಕಳಿಗೆ ಪ್ರೇರಣೆಯಾಗಿದ್ದು, ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಉತ್ತೇಜಿಸುವ ಅಗತ್ಯವನ್ನು ಮತ್ತೊಮ್ಮೆ ನೆನಪಿಸಿತು.

# ಕಾರ್ಯಕ್ಷಮತೆ ಮೆಚ್ಚಿ ಉದ್ಬಾಳ(ಯು) ಪಿಡಿಓ ಬಸವರಾಜು ಅವರಿಗೆ ಜಿಲ್ಲಾ ಪಂಚಾಯತ್ ನಿಂದ ಪ್ರಶಂಶನೀಯ ಪ್ರಮಾಣ ಪತ್ರ

❑ ನೈಜ್ಯ ದೆಸೆ ನ್ಯೂಸ್



ರಾಯಚೂರು, ಜನವರಿ 28 (ಕ.ವಾ.): ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಪಿಡಿಓ) ಶ್ರೇಷ್ಠ ಸೇವೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ, ಪ್ರತಿ ತಿಂಗಳು ಕಾರ್ಯಕ್ಷಮತೆಯ ಆಧಾರದ ಮೇಲೆ ಅತ್ಯುತ್ತಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ಆಯ್ಕೆ ಮಾಡಿ ಪ್ರಶಂಶನೀಯ ಪ್ರಮಾಣ ಪತ್ರ ನೀಡಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ತಿಳಿಸಿದರು. ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜನವರಿ 28ರಂದು ನಡೆದ ನರೇಗಾ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಮಸ್ಕಿ ತಾಲ್ಲೂಕಿನ ಉದ್ಬಾಳ (ಯು) ಗ್ರಾಮ ಪಂಚಾಯತಿಯ ಡಿಸೆಂಬರ್–2025ರ ಮಾಹೆಯಲ್ಲಿ ವಿವಿಧ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ, ಗುರಿ ಸಾಧನೆ, ಸಾರ್ವಜನಿಕ ಸೇವೆಯಲ್ಲಿ ತೋರಿದ ಬದ್ಧತೆ ಹಾಗೂ ಕಾರ್ಯಕ್ಷಮತೆಯನ್ನು ಪರಿಗಣಿಸಿ ಅತ್ಯುತ್ತಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಎಂದು ಆಯ್ಕೆಯಾದ ಬಸವರಾಜು ಅವರಿಗೆ ಪ್ರಶಂಶನೀಯ ಪ್ರಮಾಣ ಪತ್ರವನ್ನು ವಿತ–ರಿಸಲಾಯಿತು. ಬಸವರಾಜು ಅವರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯ ಸಮರ್ಪಕ ಅನುಷ್ಠಾನ, ಅಭಿವೃದ್ಧಿ ಕಾಮಗಾರಿಗಳ ಸಮಯಬದ್ಧ ಪೂರ್ಣಗೊಳಿಕೆ, ಪಾರದರ್ಶಕ ಆಡಳಿತ ಹಾಗೂ ಸಾರ್ವಜನಿಕರೊಂದಿಗೆ ಉತ್ತಮ ಸಂವಹನ ಸಾಧಿಸಿರುವುದು ಪ್ರಶಸ್ತಿಗೆ ಕಾರಣವಾಗಿದೆ ಎಂದು ತಿಳಿಸಲಾಯಿತು. ಇಂತಹ ಸಾಧನೆಗಳು ಇತರ ಪಿಡಿಓಗಳಿಗೆ ಸಹ ಪ್ರೇರಣೆಯಾಗಲಿವೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಕೂಡ ಇದೇ ರೀತಿಯಲ್ಲಿ ಪಿಡಿಓಗಳ ಕಾರ್ಯಕ್ಷಮತೆಯನ್ನು ಮೌಲ್ಯಮಾಪನ ಮಾಡಿ ಪ್ರೋತ್ಸಾಹ ನೀಡಲಾಗುವುದು. ಈ ರೀತಿಯ ಪ್ರಶಸ್ತಿಗಳಿಂದ ಅಧಿಕಾರಿಗಳಲ್ಲಿ ಇನ್ನಷ್ಟು ಉತ್ಸಾಹ ಮೂಡಿ, ಗ್ರಾಮೀಣಾಭಿವೃದ್ಧಿ ಕಾರ್ಯಗಳು ಹೆಚ್ಚು ಪರಿಣಾಮಕಾರಿಯಾಗಿ ಜಾರಿಗೆ ಬರಲಿವೆ ಎಂದು ಈಶ್ವರ್ ಕಾಂದೂ ಅವರು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ವಿವಿಧ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇನ್ನಿತರ ಅಧಿಕಾ–ರಿಗಳು ಉಪಸ್ಥಿತರಿದ್ದರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ನರೇಗಾ (ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ) ಸೇರಿದಂತೆ ವಿವಿಧ ಗ್ರಾಮೀಣಾಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾ–ರಿಯಾಗಿ ಅನುಷ್ಠಾನಗೊಳಿಸುವಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರು ಹೇಳಿದರು.ಪ್ರತಿ ತಿಂಗಳು ಕಾರ್ಯಕ್ಷಮತೆಯ ಆಧಾರದಲ್ಲಿ ಅತ್ಯುತ್ತಮ ಪಿಡಿಓಗಳನ್ನು ಗುರುತಿಸಿ ಗೌರವಿಸುವ ಈ ಕ್ರಮದಿಂದ ಸೇವಾ ಮನೋಭಾವ, ಜವಾಬ್ದಾರಿ ಹಾಗೂ ಫಲಿತಾಂಶ ಆಧಾರಿತ ಕಾರ್ಯಸಂಸ್ಕೃತಿ ಬೆಳೆಸಲು ಸಾಧ್ಯವಾಗುತ್ತಿದೆ. ಗ್ರಾಮ ಪಂಚಾಯತಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟ, ಸಮಯಪಾಲನೆ, ದಾಖಲೆಗಳ ಪಾರದರ್ಶಕತೆ ಮತ್ತು ಸಾರ್ವಜನಿಕರೊಂದಿಗೆ ಸಮನ್ವಯ ಹೆಚ್ಚಾಗುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.ಉದ್ಬಾಳ (ಯು) ಗ್ರಾಮ ಪಂಚಾಯತಿಯ ಪಿಡಿಓ ಬಸವರಾಜು ಅವರು ನರೇಗಾ ಕಾಮಗಾರಿಗಳಲ್ಲಿ ಕಾರ್ಮಿಕರ ಸಮಯೋಚಿತ ಪಾವತಿ, ಆಸ್ತಿ ಸೃಜನೆಯಲ್ಲಿ ಗುಣಮಟ್ಟದ ಮಾನದಂಡಗಳ ಪಾಲನೆ, ಕುಡಿಯುವ ನೀರು–ಸ್ವಚ್ಛತೆ–ಮೂಲಸೌಕರ್ಯ ಯೋಜನೆಗಳ ಸಮನ್ವಯಿತ ಅನುಷ್ಠಾನ, ಹಾಗೂ ದೂರುಗಳ ತ್ವರಿತ ಪರಿಹಾರಕ್ಕೆ ನೀಡಿದ ಆದ್ಯತೆ ಪ್ರಶಸ್ತಿಗೆ ಪ್ರಮುಖ ಕಾರಣಗಳಾಗಿವೆ ಎಂದು ಅಧಿಕಾ–ರಿಗಳು ವಿವರಿಸಿದರು.ಸಭೆಯಲ್ಲಿ ತಾಲ್ಲೂಕು ಪಂಚಾಯತ್ ಮಟ್ಟದ ಕಾರ್ಯನಿರ್ವಹಣಾ ಸವಾಲುಗಳು, ಯೋಜನಾ ಗುರಿಗಳ ಸಾಧನೆ, ಮುಂದಿನ ತಿಂಗಳ ಕಾರ್ಯಯೋಜನೆ ಹಾಗೂ ಕ್ಷೇತ್ರಮಟ್ಟದ ಮೇಲ್ವಿಚಾರಣೆ ಕುರಿತು ಚರ್ಚಿಸಲಾಯಿತು. ಮುಂದಿನ ದಿನಗಳಲ್ಲಿ ಕಾರ್ಯಕ್ಷಮತೆ ಮೌಲ್ಯಮಾಪನವನ್ನು ಇನ್ನಷ್ಟು ವೈಜ್ಞಾನಿಕವಾಗಿ ನಡೆಸಿ, ಉತ್ತಮ ಸಾಧನೆ ತೋರಿದ ಅಧಿಕಾರಿಗಳಿಗೆ ನಿರಂತರ ಪ್ರೋತ್ಸಾಹ ನೀಡಲಾಗುವುದು ಎಂದು ಈಶ್ವರ್ ಕಾಂದೂ ಅವರು ತಿಳಿಸಿದರು.ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ವಿವಿಧ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಭಾಗವಹಿಸಿದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಅಂಗನವಾಡಿ ನೌಕರರ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್




ಲಿಂಗಸಗೂರು, ಜ. 29 ಅಂಗನವಾಡಿ ನೌಕರರು ಹಾಗೂ ಸಹಾಯಕಿಂ–ಯರ ದೀರ್ಘಕಾಲೀನ ಸಮಸ್ಯೆಗಳ ಕುರಿತು ಸರ್ಕಾರದ ನಿರ್ಲಕ್ಷದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು ಸಂಯೋಜಿತ) ತಾಲ್ಲೂಕು ಸಮಿತಿಯ ವತಿಯಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸಿಡಿಪಿಓ ನಾಗರತ್ನಾ ಎನ್. ಅವರಿಗೆ ಮನವಿ ಸಲ್ಲಿಸಲಾಯಿತು. 2023ರಿಂದ ಬಾಕಿ ಉಳಿದಿರುವ ವೇತನ, ಭತ್ಯೆಗಳು ಹಾಗೂ ಇತರೆ ಸೌಲಭ್ಯಗಳನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. 2024–25ನೇ ಸಾಲಿನಲ್ಲಿ ನಿವೃತ್ತರಾದ ಅಂಗನವಾಡಿ ನೌಕರರಿಗೆ ಎನ್‌ಪಿಎಸ್ ಹಣ, ಗ್ರ್ಯಾಚ್ಯುಟಿ, ಬಾಕಿ ವೇತನ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಯಾವುದೇ ವಿಳಂಬವಿಲ್ಲದೆ ನೀಡಬೇಕೆಂದು ಒತ್ತಾಯಿಸಿದರು.ಅಂಗನವಾಡಿ ಕೇಂದ್ರಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಕಟ್ಟಡಗಳ ದುರಸ್ತಿ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆಯನ್ನು ತಕ್ಷಣ ನಿವಾರಿಸಬೇಕೆಂದು ಮನವಿಯಲ್ಲಿ ತಿಳಿಸಲಾಯಿತು. ಅಂಗನವಾಡಿ ನೌಕರರು ಮತ್ತು ಸಹಾಯಕಿಯರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ, ಉದ್ಯೋಗ ಭದ್ರತೆ, ನಿವೃತ್ತಿ ವಯಸ್ಸು ಹೆಚ್ಚಿಸುವುದು ಸೇರಿದಂತೆ ಪ್ರಮುಖ ಬೇಡಿಕೆಗಳು ಪ್ರತಿಭಟನೆಯಲ್ಲಿ ಪ್ರತಿಧ್ವನಿಸಿವೆ. ಜೊತೆಗೆ ಮಕ್ಕಳ ಪೌಷ್ಟಿಕ ಆಹಾರ ಸರಬರಾಜಿನಲ್ಲಿ ಆಗುತ್ತಿರುವ ಲೋಪದೋಷಗಳನ್ನು ತಕ್ಷಣ ಸರಿಪಡಿಸಬೇಕೆಂದು ಸರ್ಕಾರವನ್ನು ಆಗ್ರಹಿಸಲಾಯಿತು.ನಮ್ಮ ನ್ಯಾಯಸಮ್ಮತ ಬೇಡಿಕೆಗಳಿಗೆ ಸ್ಪಂದನೆ ದೊರೆಯದಿದ್ದಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘದ ಮುಖಂಡರು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ಸಿಐಟಿಯು ಜಿಲ್ಲಾ ಸಮಿತಿ ಜಂಟಿ ಕಾರ್ಯದರ್ಶಿ ರಮೇಶ ವೀರಾಪೂರು, ಅಂಗನವಾಡಿ ಸಂಘದ ಅಧ್ಯಕ್ಷೆ ಸರಸ್ವತಿ, ಕಾರ್ಯದರ್ಶಿ ಮಹೇಶ್ವರಿ, ಮುಖಂಡರಾದ ಲಕ್ಷ್ಮೀ ನಗರೂರು, ಮಲ್ಲನಗೌಡ, ಸುಜಾತಾ, ಸುಮಿತ್ರಾ, ನೀಲಮ್ಮ, ಜಲಜಾಕ್ಷಿ, ಶಶಿಕಲಾ ಸೇರಿದಂತೆ ಅನೇಕ ಅಂಗನವಾಡಿ ನೌಕರರು ಮತ್ತು ಸಹಾಯಕಿಯರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.ಪ್ರತಿಭಟನೆಯ ಬಳಿಕ ಸಿಡಿಪಿಓ ನಾಗರತ್ನಾ ಎನ್. ಅವರು ಮನವಿಯನ್ನು ಸ್ವೀಕರಿಸಿ, ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಹಾಗೂ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಆದರೆ ಸ್ಪಷ್ಟ ಕಾಲಾವಧಿ ಘೋಷಣೆ ಆಗದ ಹಿನ್ನೆಲೆಯಲ್ಲಿ ಸಂಘದ ಪದಾಧಿಕಾರಿಗಳು ಅಸಮಾಧಾನ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹೋರಾಟವನ್ನು ವಿಸ್ತರಿಸುವ ಬಗ್ಗೆ ಸಂಘ ತೀರ್ಮಾನ ಕೈಗೊಳ್ಳಲಿದೆ ಎಂದು ತಿಳಿಸಿದರು.

## ನೇಮಕಾತಿ ಪ್ರಕಟಣೆ

**KKRTC** ನೇಮಕಾತಿ **2026 – 78** ಚಾಲಕ ಹುದ್ದೆಗಳಿಗೆ ವಾಕ್–ಇನ್ ಸಂದರ್ಶನ ಏಏಖಖಿಅ ನೇಮಕಾತಿ 2026: **78** ಚಾಲಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ಜನವರಿ 2026 ರ **KKRTC** ಅಧಿಕೃತ ಅಧಿಸೂಚನೆಯ ಮೂಲಕ ಚಾಲಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೀದರ್ – ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 04–ಫೆಬ್ರವರಿ–2026 ರಂದು ವಾಕ್–ಇನ್–ಸಂದರ್ಶನಕ್ಕೆ ಹಾಜರಾಗಬಹುದು. ಅಧಿಸೂಚನೆ ಬಿಡುಗಡೆ ದಿನಾಂಕ: **20–01–2026** ವಾಕ್–ಇನ್ ದಿನಾಂಕ: 04–ಫೆಬ್ರವರಿ–2026 ವಾಕ್–ಇನ್ ಸಂದರ್ಶನವು ಫೆಬ್ರವರಿ 03 ಮತ್ತು **04, 2026** ರಂದು ನಡೆಯಲಿದೆ ಅಧಿಕೃತ ವೆಬ್‌ಸೈಟ್: kkrtc.karnataka.gov.in

## ಉತ್ಸವದಲ್ಲಿ ರಾಯಚೂರು ಸಿಟಿ ಸುಂದರವಾಗಿ ಕಾಣಲಿ: ಜುಬಿನ್ ಮೊಹಪಾತ್ರ



❑ ನೈಜ್ಯ ದೆಸೆ ನ್ಯೂಸ್

ರಾಯಚೂರು ಜನವರಿ 28 (ಕರ್ನಾಟಕ ವಾರ್ತೆ): ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವವು ಯಶಸ್ವಿಯಾಗಿ ನಡೆಯುವ ನಿಟ್ಟಿನಲ್ಲಿ ರಾಯಚೂರು ಸಿಟಿಯು ಸುಂದರವಾಗಿ ಕಾಣಬೇಕು. ಈ ದಿಶೆಯಲ್ಲಿ ಯೋಚಿಸಿ ಪ್ರತಿಯೊಬ್ಬ ಪೌರ ಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ಸಕ್ರಿಯ ಭಾಗಿಯಾಗಬೇಕು ಎಂದು ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಹೇಳಿದರು.ನಗರದ ಜೈಲ್‌ಖಾನ್ ಬಳಿಯಲ್ಲಿರುವ ಮಹಿಳಾ ಸಮಾಜ ಮೈದಾನದಲ್ಲಿ ಜನವರಿ 28ರಂದು ಪೌರ ಕಾರ್ಮಿಕರ ಸಭೆ ನಡೆಸಿ ಅವರು ಮಾತನಾಡಿದರು.ಶುಚಿತ್ವ ಇದ್ದಲ್ಲಿ, ಶಿಸ್ತು ಇದ್ದಲ್ಲಿ ಶಾಂತಿ ಇರುತ್ತದೆ. ಈ ದಿಶೆಯಲ್ಲಿ ನಾವೆಲ್ಲರೂ ಯೋಚಿಸಿ ಉತ್ಸವದ ನಿಗದಿಯಾದ ಈ ಸಂದರ್ಭದಲ್ಲಿ ನಮ್ಮ ನಮ್ಮ ಮನೆ, ಮನೆಯ ಸುತ್ತಲಿನ ಪರಿಸರ, ರಸ್ತೆ, ಗಟಾರು, ಸಾರ್ವಜನಿಕ ಸ್ಥಳಗಳು ಸೇ–ರಿದಂತೆ ವಿವಿಧೆಡೆಯಲ್ಲಿ ಶುಚಿತ್ವಕ್ಕೆ ಒತ್ತು ಕೊಡಬೇಕು. ರಾಯಚೂರು ಜಿಲ್ಲಾ ಉತ್ಸವಕ್ಕೆ ಅತಿಥಿಗಳಾಗಿ ಆಮಿಸುವ ಜನತೆಗೆ ರಾಯಚೂರು ನಗರವು ಸುಂದರವಾಗಿ ಕಾಣುವಂತಾಗಬೇಕು. ಜನತೆಗೆ ಸ್ವಚ್ಛತೆಯ ಸಂದೇಶ ರವಾನೆಯಾಗಬೇಕು. ರಾಯಚೂರ ನಗರವನ್ನು ಸ್ವಚ್ಛ ನಗರವೆಂದು ಜನರು ಕೊಂಡಾಡುವಂತೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಆಯುಕ್ತರು ಪೌರ ಕಾರ್ಮಿಕರಿಗೆ ಸ್ವಚ್ಛತೆಯ ಪಾಠ ಮಾಡಿದರು.ರಾಯಚೂರು ಉತ್ಸವಕ್ಕೆ ಇನ್ನು ಒಂದು ವಾರ ಮಾತ್ರ ಬಾಕಿ ಇದೆ. ಈಗಾಗಲೇ ನಗರದಲ್ಲಿ ಕಸ ಸಂಗ್ರಹ ಸ್ಥಳಗಳಲ್ಲಿ ನಿತ್ಯ ಕಸ ವಿಲೇವಾರಿ ನಡೆಯುತ್ತಿದೆ. ನಿತ್ಯ ಮನೆ ಮನೆ ಕಸ ಸಂಗ್ರಹ, ಕಾರ್ಖಾನೆ, ಆಸ್ಪತ್ರೆ ಸೇರಿದಂತೆ ಎಲ್ಲಾ ಕಡೆಗಳಲ್ಲಿ ಕಸ ವಿಲೇವಾರಿ ನಡೆಯುತ್ತಿದೆ. ಬೇರೆ ಬೇರೆ ಕಡೆಗಳಲ್ಲಿ ಸ್ವಚ್ಛತೆ ಕಾಣಲಾರಂಭಿಸಿದೆ. ಈ ಕೆಲಸ ನಿರಂತರ ಮುಂದುವರೆಯಬೇಕು ಎಂದು ಸೂಚನೆ ನೀಡಿದರು. ಉತ್ಸವಕ್ಕೂ ಮುಂಚಿತವಾಗಿ ಪ್ರತಿಯೊಬ್ಬರು ಸ್ವಚ್ಛತೆಯ ಕಡೆಗೆ ಮೊದಲ ಆದ್ಯತೆ ನೀಡಬೇಕು. ರಾಜ್ಯ, ಅಂತಾರಾಜ್ಯ, ಮಟ್ಟದ ಕಲಾವಿದರು ಮೊದಲ ಬಾರಿಗೆ ಜಿಲ್ಲೆಗೆ ಆಗಮಿಸಲಿದ್ದಾರೆ. ಅವರಿಗೆ ರಾಯಚೂರು ಸ್ವಚ್ಛ ನಗರವೆಂದು ತೋ–ರಿಸಿಕೊಡಬೇಕಾಗಿದೆ.ಪ್ರಮುಖವಾಗಿ ಮುಖ್ಯ ರಸ್ತೆಗಳು, ಮುಖ್ಯ ರಸ್ತೆಗಳಲ್ಲಿರುವ ರಾಜ ಕಾಲುವೆಗಳಿಂದ ದುರ್ವಾಸನೆ ಬೀರದಂತೆ ಬೀಚಿಂಗ್ ಪೌಡರ್ ಸಿಂಪಡಣೆ ಮಾಡಬೇಕು. ಯಾವುದೇ ಕಡೆಗಳಲ್ಲಿ ಕಸ ಕಾಣಿಸಬಾರದು. ಉತ್ಸವ ಕಾರ್ಯಕ್ರಮಗಳು ನಿಗದಿಯಾದ ಶ್ರೀ ಪಂಡಿತ ಸಿದ್ಧರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರ, ಜೈಲ್ ಖಾನ್ ಬಳಿಯ ಮಹಿಳಾ ಸಮಾಜ ಆವರಣ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ವಾಲ್‌ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದ ಒಳಾಂಗಣ ಮತ್ತು ಹೊರಾಂಗಣದಲ್ಲಿ ಈಗಿನಿಂದಲೇ ಶುಚಿತ್ವ ಕಾರ್ಯ ನಡೆಯಬೇಕು. ಈ ಎಲ್ಲ ಕಡೆಗೆ ಸಹ ಪ್ರತಿ ದಿನ ಶುಚಿತ್ವ ಕಾರ್ಯವಾಗಬೇಕು ಎಂದು ಆಯುಕ್ತರು ಸೂಚನೆ ನೀಡಿದರು. ಬೇರೆ ಬೇರೆ ಕಡೆಗಳಲ್ಲಿ ಫಾಗಿಂಗ್ ಮಾಡಬೇಕು. ಎಲ್ಲೆಂದರಲ್ಲಿ ಕಸ ಎಸೆಯದಂತೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.ಮೈಸೂರು, ಮಂಗಳೂರು ಸೇರಿದಂತೆ ಕೆಲ ನಗರಗಳು ಸ್ವಚ್ಛತೆಗೆ ಹೆಸರುವಾಸಿಯಾಗಿದೆ. ಅವುಗಳ ಸಾಲಿನಲ್ಲಿ ರಾಯಚೂರು ಸಹ ಸೇರುವ ಹಾಗೆ ರಾಯಚೂರನ್ನು ಸ್ವಚ್ಛ ನಗರವೆಂದು ತೋರಿಸಿಕೊಡಲು ರಾಯಚೂರು ಉತ್ಸವ ಒಂದು ಅವಕಾಶವಾಗಿದ್ದು, ಇದನ್ನು ಸವಾಲಾಗಿ ಸ್ವೀಕರಿಸಿ ಕೆಲಸ ಮಾಡಬೇಕು. ಪ್ರತಿಯೊಬ್ಬರು ಸ್ವಚ್ಛತೆಯ ಕಾರ್ಯವನ್ನು ನಮ್ಮ ಮನೆಯ ಕೆಲಸವೆಂದು ಭಾವಿಸಿ ಜವಾಬ್ದಾರಿ ತೆಗೆದುಕೊಳ್ಳಬೇಕು. ಆಗ ಮಾತ್ರ ಸ್ವಚ್ಛ ನಗರ ಸಾಲಿನಲ್ಲಿ ನಮ್ಮ ಜಿಲ್ಲೆ ಗುರುತಿಸಲು ಸಾಧ್ಯವಾಗುತ್ತದೆ ಎಂದರು.ಪೌರ ಕಾರ್ಮಿಕರ ಮೇಲೆ ಸರಿಯಾಗಿ ಮೇಲ್ವಿಚಾರಣೆ ಮಾಡಲು ಇದೆ ವೇಳೆ ಆಯುಕ್ತರು, ಪಾಲಿಕೆಯ ಪರಿಸರ ಅಭಿಯಂತರರು ಮತ್ತು ಪರಿಸರ ನಿರೀಕ್ಷರಿಗೆ ಸೂಚನೆ ನೀಡಿದರು.ಇದೇ ಸಂದರ್ಭದಲ್ಲಿ ಪರಿಸರ ವಿಭಾಗದ ಅಭಿಯಂತರರಾದ ಜೈಪಾಲ್ ರೆಡ್ಡಿ, ಉಪ ಆಯುಕ್ತರಾದ ಮಲ್ಲಿಕಾರ್ಜುನ ಸೇರಿದಂತೆ ಪೌರ ಕಾರ್ಮಿಕರು, ಪಾಲಿಕೆಯ ವಿವಿಧ ಅಧಿಕಾರಿಗಳು ಇದ್ದರು.

## ಆಹಾರ ಇಲಾಖೆಯಲ್ಲಿ ಶಿವಪ್ಪ ಹಳ್ಳಿಹೊಸೂರು ಶಾಮೀಲಾಗಿರುವುದಿಲ್ಲ :ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಯಚೂರು ಸ್ಪಷ್ಟನೆ

❑ ನೈಜ್ಯ ದೆಸೆ ನ್ಯೂಸ್



ಆಹಾರ ಇಲಾಖೆಯಲ್ಲಿ ಶಿವಪ್ಪ ಹಳ್ಳಿಹೊಸೂರು ಶಾಮೀಲಾಗಿರುವುದಿಲ್ಲ :ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಯಚೂರು ಸ್ಪಷ್ಟನೆ ಮಾನ್ವಿ. ಆಹಾರ ಇಲಾಖೆಯಲ್ಲಿ ಶಿವಪ್ಪ ಹಳ್ಳಿ ಹೊಸೂರು ಶಾಮೀಲಾಗಿರುವುದಿಲ್ಲ. ಹನುಮೇಶನಾಯಕರವರು ಉದ್ದೇಶ ಪೂರ್ವಕವಾಗಿ ಅವರ ಹೆಸರಿಗೆ ಕಳಂಕ ತರುವ ಕೆಲಸವನ್ನು ಮಾಡುತ್ತಿದ್ದಾರೆ ಎಂದು ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಯಚೂರು ಇವರು ಈ ಪತ್ರಿಕೆಯ ಮೂಲಕ ತಿಳಿಸಿದ್ದಾರೆ.ಇಲಾಖೆಯ ನಿಯಮಗಳನ್ನು ಧಿಕ್ಕ–ರಿಸಿರುವುದಿಲ್ಲ ಇಲಾಖೆಯಲ್ಲಿ ನಿವೃತ್ತಿಯಾದರೂ ಕೂಡ ಅವರು ಅನೈತಿಕಾವಾಗಿ ವರ್ತಿಸಿರುವುದಿಲ್ಲ ಎಂದು ಹೇಳಿದರು.ಹನುಮೇಶ ನಾಯಕರವರು ಸರ್ಕಾರದ ಮಹತ್ವದ ಯೋಜನೆಗಳಾದ ಆಹಾರ ಧಾನ್ಯ ವಿತರಣೆಯಲ್ಲಿ ಉದ್ದೇಶಪೂರ್ವಕ ಅಕ್ರಮ, ಅರ್ಹ ಫಲಾನುಭವಿಗಳಿಗೆ ವಂಚನೆ ಹಾಗೂ ಅಧಿಕಾರ ದುರುಪಯೋಗ ನಡೆಸಲಾಗಿದೆ ಎಂದು ಹೇಳುತ್ತಿದ್ದಾರೆ ಅದು ಶುದ್ಧ ಸುಳ್ಳು. ನ್ಯಾಯ ಬೆಲೆ ಅಂಗಡಿಯ ಮಾಲೀಕರಿಗೆ ಸರಕಾರದಿಂದ ಎಷ್ಟು ಅಕ್ಕಿ ಬರುತ್ತದೆ ಅಷ್ಟು ಅಕ್ಕಿಯನ್ನು ಸಂಬಂಧಪಟ್ಟ ಅಧಿಕಾರಿಗಳು ನೀಡುತ್ತಿದ್ದಾರೆ.ಇದರಿಂದ ಜನರಿಗೆ ಬಹಳ ಅನುಕೂಲವಾಗುತ್ತಿದೆ. ಇದರಿಂದ ಬಡ ಹಾಗೂ ಶ್ರಮಿಕ ವರ್ಗದ ಜನರಿಗೆ ಅನುಕೂಲವಾಗುತ್ತಿದೆ.ಶಿವಪ್ಪ ಹಳ್ಳಿ ಹೊಸೂರು ಅವರ ಮೇಲೆ ಉದ್ದೇಶ ಪೂರ್ವ ಕವಾಗಿ ಹನುಮೇಶ ನಾಯಕರವರು ಆರೋಪ ಮಾಡುತ್ತಿರುವುದು ಸರಿಯಲ್ಲ ಎಂದು ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರು ನಾಯಕ ಆಗ್ರಹಿಸಿದರು.

## ಪಾಲಕರು ಶಾಲೆಯ ಆಧಾರ ಸ್ತಂಭಗಳು – ಡಾ.ಗುಗ್ಗವಾಡ



❑ ನೈಜ್ಯ ದೆಸೆ ನ್ಯೂಸ್

ಶಾಲೆಯ ಶಿಕ್ಷಕರು ಮಕ್ಕಳ ಭವಿಷ್ಯ ರೂಪಿಸುವಂತಹ ಸ್ತಂಭಗಳಾದರೆ, ಪಾಲಕರು ಶಾಲೆಯ ಅಭಿವೃದ್ಧಿಯ ಆಧಾರ ಸ್ತಂಭಗಳು. ಪಾಲಕರು ಶಾಲೆಯ ಚಟುವಟಿಕೆಗಳಲ್ಲಿ ಭಾಗವಹಿಸಿ ಸಹಕರಿಸಿ ಮಕ್ಕಳ ಹೋಮ ವರ್ಕ್, ಪ್ರಗತಿ ಪರಿಶೀಲಿಸುವುದರಿಂದ ಮಕ್ಕಳಲ್ಲಿನ ಗುಣಮಟ್ಟ ಹೆಚ್ಚಿಸಿ ಆ ಶಾಲೆಯ ಅಭಿವೃದ್ಧಿ ಆಗುವುದರಲ್ಲಿ ಎರಡು ಮಾತಿಲ್ಲ ಎಂದು ಕೇವಲ 40 ಮಕ್ಕಳಿಂದ ಪ್ರಾರಂಭವಾದ ಈ ರಾಜ್ವಿಕಾ ಶಾಲೆಯಲ್ಲಿ ಈಗ 200ಕ್ಕಿಂತಲೂ ಹೆಚ್ಚು ಮಕ್ಕಳು ಅಭ್ಯಾಸ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಇದರಲ್ಲಿ ಶಿಕ್ಷಕರ ಪಾಲಕರ ಪಾತ್ರ ಮಹತ್ವದ್ದಾಗಿದೆ ಎಂದು ಜಯದೇವ ಆಸ್ಪತ್ರೆಯ ಆಡಳಿತ ಅಧಿಕಾರಿಗಳಾದ ಡಾ. ರುದ್ರಪ್ಪ ಗುಗ್ಗವಾಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ದಿನಾಂಕ: 25.01.2026 ರಂದು ಸೇಡಂ ರಸ್ತೆಯ ಬಸವೇಶ್ವರ ಆಸ್ಪತ್ರೆಯ ಎದುರುಗಡೆಯಲ್ಲಿರುವ ವಿದ್ಯಾನಗರದ ರಾಜ್ವಿಕ ಶಾಲೆಯ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಶಿಕ್ಷಣ ಒಂದೆ ಸಿಕ್ಕರೆ ಸಾಲದು ಅದರ ಜೊತೆ ಇನ್ನು ಅನೇಕ ಅಂಶಗಳನ್ನು ಬಾಲ್ಯದಿಂದಲೇ ರೂಢಿಸಿಕೊಂಡರೇ ಆತ ಯಶಸ್ವಿ ವಿದ್ಯಾರ್ಥಿಯಾಗಲು ಸಾಧ್ಯ. ರಾಜ್ವಿಕ ಶಾಲೆಯಲ್ಲಿ ವರ್ಷದುದ್ದಕ್ಕು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆ ನಿರಂತರವಾಗಿ ನಡೆಯುತ್ತಿವೆ. ಎಂದು ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿಲ್ಲಾ ಕ.ಸಾ.ಪ. ಗೌರವ ಕಾರ್ಯದರ್ಶಿ ಶಿವರಾಜ ಅಂಡಗಿ ಹಾಗೂ ವಿದ್ಯಾನಗರ ವೆಲ್‌ಫೇರ್ ಸೊಸೈಟಿ ಅಧ್ಯಕ್ಷ ಮಲ್ಲಿನಾಥ ದೇಶಮುಖ ಮಾತನಾಡಿದರು. ವೇದಿಕೆ ಮೇಲೆ ಶ್ರೀದೇವಿ ಕವಡಿಮಠ, ಶೋಭಾ ಓಕಳಿ, ಸುಹಾಸಿನಿ ಸಿಂಗ್ ಉಪಸ್ಥಿತರಿದ್ದರು. ರಾಜ್ವಿಕಾ ಶಾಲೆ ಹಂತ ಹಂತವಾಗಿ ಬೆಳೆಯುತ್ತಿದೆ ಮುಂದಿನ ದಿನಗಳಲ್ಲಿ ಸಿ.ಬಿ.ಎಸ್.ಸಿ. ಪ್ರಗತಿ ಹೊಂದುವಂತಹ ಹಂತದಲ್ಲಿದೆ ಎಂದು ಕಾರ್ಯಕ್ರಮದ ಅಧ್ಯಕ್ಷತೆ ಶಾಲೆಯ ಅಧ್ಯಕ್ಷ ಸಂಜಯ್ ಸಿಂಗ್ ರವರು ಮಾತನಾಡಿದರು. ಮಕ್ಕಳಿಂದ ನೃತ್ಯ, ಹಾಡು ಮತ್ತು ಸಂಸ್ಕೃತಿಕ ಕಾರ್ಯಕ್ರಮ ಜರುಗಿದವು. ಪ್ರಾರಂಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಶಿಲ್ಪಾ ಕೋಟೆ ಸ್ವಾಗತಿಸಿದರು. ಸಮನ್ವಿ ಮತತ್ತು ಸುಮಯ್ಯ ಕಾರ್ಯಕ್ರಮ ನಿರೂಪಿಸಿದರು, ರಾಜೇಶ್ವರಿ ಪಾಟೀಲ ವಂದಿಸಿದರು. ಕಾರ್ಯಕ್ರಮದಲ್ಲಿ ಅಭಯ ಸಿಂಗ್, ನಸೀಮಾ, ನಿರ್ಮಲಾ, ದೀಪಿಕಾ ಅನ್ನಪೂರ್ಣ, ಸುವಾಸಿನಿ ಸಿಂಗ್, ಮಕ್ಕಳು ಹಾಗು ಪಾಲಕರು ಉಪಸ್ಥಿತರಿದ್ದರು

## ಭೋವಿ ವಡ್ಡರ ಸಮಾಜ ತಾಲೂಕು ಘಟಕದಿಂದ ಬೆಳವಡಿ ಯಲ್ಲಣ್ಣನವರ 226ನೇ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್



ಕರ್ನಾಟಕ ರಾಜ್ಯ ಭೋವಿ ವಡ್ಡರ ಸಮಾಜ ತಾಲೂಕು ಘಟಕದಿಂದ ಸಿಂಧನೂರು ನಗರದಲ್ಲಿ ಪ್ರಥಮ ಬಾರಿಗೆ ಸ್ವತಂತ್ರ ಹೋರಾಟಗಾರ ಕಿತ್ತೂರು ಸಂಸ್ಥಾನದ ಬೆಳವಡಿ ವಡ್ಡರ ಯಲ್ಲಣ್ಣನವರ 226ನೇ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ನಗರದ ಪ್ರವಾಸಿಮಂದಿರ ಎದುರಿಗೆ ಇರುವ ತರಕಾರಿ ಮಾರುಕಟ್ಟೆಯಲ್ಲಿ ಜ.28 ಬುಧವಾರದಂದು ಸರಳ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಯಿತು.ನಂತರ ತಾಲೂಕು ಯುವ ಘಟಕದ ಅಧ್ಯಕ್ಷರಾದ ರೌಡಕುಂದ ಹನುಮೇಶ ಮಲ್ಲದಗುಡ್ಡ ಮಾತನಾಡಿ, ಎಂಟದೆಯ ಭಂಟ ಸಂಗೊಳ್ಳಿ ರಾಯಣ್ಣನ ಬಲಗೈ ಭಂಟನಾಗಿ, ಕಿತ್ತೂರು ರಾಣಿ ಚೆನ್ನಮ್ಮನವರ ಎರಡನೇ ದತ್ತು ಪುತ್ರನಾಗಿ, ಬ್ರಿಟಿಷರ ವಿರುದ್ಧ ಹೋರಾಟ ಮಾಡಿ, ನಮ್ಮ ಭಾರತ ದೇಶಕ್ಕೆ ಸ್ವಾತಂತ್ರ್ಯ ತರುವಲ್ಲಿ ಅವರು ಕೂಡ ಒಬ್ಬರಾಗಿದ್ದರು, ಇಂತಹ ಮಹಾನ್ ವ್ಯಕ್ತಿಯನ್ನು ಪಡೆದ ಸಮಾಜ ಹೆಮ್ಮೆ ಪಡಬೇಕಾದ ವಿಷಯವಾಗಿದೆ.ಶಬ್ದವೇಧಿ ತಂತ್ರದ ವಿದ್ಯೆಯನ್ನು ಕಲಿತಿದ್ದ ಯಲ್ಲಣ್ಣ ಶತ್ರುಗಳ ಸೈನ್ಯ ಬರುವುದನ್ನು ಕೇವಲ ಶಬ್ದದಿಂದಲೇ ಕಂಡು ಹಿಡಿದು, ಸಂಗೊಳ್ಳಿ ರಾಯಣ್ಣನಿಗೆ ತಿಳಿಸುತ್ತಿದ್ದ ಸುಮಾರು 800 ಸೈನಿಕರನ್ನು ಒಗ್ಗೂಡಿಸಿ ರಾಯಣ್ಣನ ಬೆನ್ನೆಲುಬಾಗಿ ನಿಂತ ಮಹಾನ್ ಧೀರವಂತ ನಿಷ್ಠಾವಂತ ಸೇವಕನಾಗಿದ್ದರು. ಕರ್ನಾಟಕ ರಾಜ್ಯದಲ್ಲಿ ಬೆಳವಡಿ ಯಲ್ಲಣ್ಣನವರ ಪ್ರಾಧಿಕಾರ ರಚನೆಯಾಗಬೇಕು ರಾಜ್ಯ ಸರ್ಕಾರ ಈ ವಿಷಯವನ್ನು ಸೂಕ್ಷ್ಮವಾಗಿ ಗಮನಿಸಿ ನಮ್ಮ ಭೋವಿ ವಡ್ಡರ ಸಮಾಜದ ಜನರ ಬೇಡಿಕೆ ಈಡೇ–ರಿಸಬೇಕು ಎಂದರು.ಈ ವೇಳೆ: ಶಂಕರಪ್ಪ ಬ್ಯಾಡಗಿ ವಿರುಪಾಪುರ, ನಿರುಪಾದಿ ಸಾಸಲಮರಿ, ವೀರೇಶ ಸಿದ್ರಾಂಪುರ, ಶಿವಕುಮಾರ ವಿರುಪಾಪುರ, ಹನುಮೇಶ ತಿಡಿಗೋಳ, ತಿಮ್ಮಾರೆಡ್ಡಿ ಸಾಸಲಮರಿ, ವೆಂಕಟೇಶ ತುರ್ವಿಹಾಳ, ಯಂಕೋಬ ರೌಡಕುಂದ, ವೆಂಕಟೇಶ ಸಿಂಧನೂರು, ದ್ಯಾವಣ್ಣ ಮಲ್ಲದಗುಡ್ಡ, ಮಾರೇಶ ರಾಗಲಪರ್ವಿ, ಸೇರಿದಂತೆ ಸಮಾಜದ ಅನೇಕ ಮುಖಂಡರು ಭಾಗವಹಿಸಿ ಬೆಳವಡಿ ಯಲ್ಲಣ್ಣನ 226ನೇ ಜಯಂತಿ ಆಚರಿಸಿದರು.

## ಸಾಹಿತ್ಯ ರತ್ನ ಪ್ರಶಸ್ತಿಗೆ ಆಂಜನಯ್ಯ ಭೋವಿ ಶಿಕ್ಷಕ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ವಿಜಯನಗರ ಜಿಲ್ಲೆಯ ಕೊಟ್ಟೂರಿನ ಇಂದಿರಾ ಚಾರಿಟಬಲ್ ಅಂಡ್ ಎಜ್ಯುಕೇಷನಲ್ ಟ್ರಸ್ಟ್ (ರಿ.). ಆಡಳಿತ ಮಂಡಳಿ ಅಧೀನದಲ್ಲಿ ನಡೆಯುತ್ತಿರುವ ಇಂದು ಪದವಿ ಪೂರ್ವ ಮಹಾವಿದ್ಯಾಲಯ 21ನೇ ವರ್ಷಕ್ಕೆ ಕಾಲಿಡುತ್ತಿರುವ ಸುಸಂದರ್ಭದಲ್ಲಿ ಕನ್ನಡ ಭಾಷಾ ವಿಷಯದ ಶಿಕ್ಷಕರಾಗಿ ಪ್ರೌಢಶಾಲೆಯಲ್ಲಿ ಗಣನೀಯ ಸೇವೆ ಸಲ್ಲಿಸಿ ಅತ್ಯುತ್ತಮ ಸಾಧನೆಗೈದ, ಸಾವಿರಾರು ವಿದ್ಯಾರ್ಥಿಗಳಿಗೆ ಭವಿಷ್ಯದ ಮಾರ್ಗದರ್ಶನ ತೋರಿದ ರಾಯಚೂರು ಜಿಲ್ಲಾ ಮಾನವಿ ತಾಲೂಕಿನ ಶ್ರೀ ವೆಂಕಟೇಶ್ವರ ಕನ್ನಡ ಭಾಷಾ ಶಿಕ್ಷಕರಾದ ಶ್ರೀ ಆಂಜನಯ್ಯ ಬೋವಿ ಸುಂಕೇಶ್ವರ ದಿನಾಂಕ 25–01–2016ರಂದು ಕೊಟ್ಟೂರಿನ ಇಂದು ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ನಡೆದ ಆಡಳಿತ ಮಂಡಳಿ ವತಿಯಿಂದ "ಸಾಹಿತ್ಯ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.ಸಂಸ್ಥೆಯ ಅಧ್ಯಕ್ಷರಾದ ಮಹಾಂತೇಶ್ ಓಲೇಕಾರ್ ಹಾಗೂ ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.**

## ಸೇವಾ ಪೂರ್ವ ತರಬೇತಿ ಮುಕ್ತಾಯ ಸಮಾರಂಭ

❑ ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ಪಟ್ಟಣದ ಲಕ್ಷ್ಮಣಸಿಂಗ್ ಅ.ಹಜೇರಿ ವಿದ್ಯಾಭಾರತಿ ಪ್ರೌಢಶಾಲೆಯಲ್ಲಿ ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯ ಬಿ.ಎಡ್. ಪ್ರಶಿಕ್ಷಣಾರ್ಥಿಗಳ 25 ದಿನಗಳ ನಿಕಟ ಸೇವಾ ಪೂರ್ವ ತರಬೇತಿ ಮುಕ್ತಾಯ ಸಮಾರಂಭವನ್ನು ಬುಧವಾರ ಆಯೋಜಿಸಲಾಯಿತು.ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯ ಪ್ರದೀಪಜಿ ಆರ್. ಅವರು ಮಾತನಾಡಿ ಬಿ. ಈಡಿ. ಪ್ರಶಿಕ್ಷಣಾರ್ಥಿಗಳಿಗೆ ಶಾಲೆಯ ಸಹಶಿಕ್ಷಕರು ಉತ್ತಮವಾದ ಸಲಹೆ ಸೂಚನೆ ನೀಡಿದ್ದಾರೆ. ಇಲ್ಲಿಯ ಮಕ್ಕಳು ಕೂಡ ಅಭ್ಯಾಸದ ಜೊತೆ ಸಹಕಾರ ನೀಡಿದ್ದಾರೆ, ಪ್ರಶಿಕ್ಷಣಾರ್ಥಿಗಳಿಂದ 25 ದಿನಗಳ ಕಾಲ ನಮ್ಮ ಮಕ್ಕಳಿಗೆ ಉತ್ತಮ ಪಾಠದೊಂದಿಗೆ ಪಠ್ಯೇತರ ಚಟುವಟಿಕೆಗಳನ್ನು ಕೈಗೊಂಡು ಕಲಿಕಾ ಬಲವರ್ಧನೆಗೆ ಶಕ್ತಿ ತುಂಬಿದ್ದಾರೆ. ಹೀಗಾಗಿ ಪ್ರಶಿಕ್ಷಣಾರ್ಥಿಗಳಿಗೆ ಉತ್ತಮವಾದ ತರಬೇತಿಯಾಗಿದೆ ಎಂದು ಹೇಳಿದರು.ಬಾಲ ಭಾರತಿ ಪ್ರಾಥ–ಮಿಕ ಶಾಲೆಯ ಮುಖ್ಯೋಪಾಧ್ಯಾಯ ಮಹೇಶಜಿ ಅವರು ಪ್ರಶಿಕ್ಷಣಾರ್ಥಿಗಳು ತಮ್ಮ ಬಿ. ಎಡ್ ಅಭ್ಯಾಸದ ಜೊತೆ ಖಇಖ ಮತ್ತು ಅಇಖ ಕುರಿತು ಅಭ್ಯಾಸವನ್ನು ಕೂಡ ಕೈಗೊಂಡು ತಮ್ಮ ಮುಂದಿನ ಉತ್ತಮ ಬದುಕನ್ನು ಕಟ್ಟಿಕೊಳ್ಳುವ ಪ್ರಯತ್ನ ಮಾಡಬೇಕೆಂದು ತಿಳಿಸಿದರು. ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕರಾದ ಉಮೇಶ ಮಂಗೊಂಡ ಮಾತನಾಡಿ ನಮ್ಮ ಪ್ರಶಿಕ್ಷಣಾರ್ಥಿಗಳಿಗೆ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸಹಶಿಕ್ಷಕರು ಉತ್ತಮವಾದ ಮಾರ್ಗದರ್ಶನ ಹಾಗೂ ಸಲಹೆ ಸೂಚನೆ ನೀಡಿದ್ದಾರೆ. ಪ್ರಶಿಕ್ಷಣಾರ್ಥಿಗಳು ಘಟಕ ಪರೀಕ್ಷೆಗಳನ್ನ ಉತ್ತಮವಾಗಿ ತೆಗೆದುಕೊಂಡಿದ್ದಾರೆ ಪ್ರಥಮ ದ್ವಿತೀಯ ತೃತೀಯ ಬಂದ ವಿದ್ಯಾರ್ಥಿಗಳಿಗೆ ಬಹುಮಾನವನ್ನ ನೀಡಿದ್ದು ವಿದ್ಯಾರ್ಥಿಗಳು ಉತ್ತಮ ರೀತಿ ಪಾಠವನ್ನು ಆಲಿಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ತೆಗೆದುಕೊಂಡಿದ್ದು ನೋಡಿದರೆ ಇಲ್ಲಿ ವಿದ್ಯಾರ್ಥಿಗಳು ಅಭ್ಯಾಸದ ಜೊತೆ ಸಹಕಾರ ನೀಡಿದ್ದಾರೆ, ಹೀಗಾಗಿ ನಮ್ಮ ಪ್ರಶಿಕ್ಷಣಾರ್ಥಿಗಳಿಗೆ ಉತ್ತಮವಾದ ತರಬೇತಿಯಾಗಿದೆ ಎಂದು ಹೇಳಿದರು.ಪ್ರೌಢಶಾಲಾ ಸಹ ಶಿಕ್ಷಕ ಈರಣ್ಣ ಶರಣ–ರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು ಹಾಗೂ ಶಾಲೆಯ ವಿದ್ಯಾರ್ಥಿಗಳು ಪ್ರಶಿಕ್ಷಣಾರ್ಥಿಗಳ ಕುರಿತು ಅನಿಸಿಕೆ ವ್ಯಕ್ತಪಡಿಸಿದರು.9ನೇ ತರಗತಿಯ ವಿದ್ಯಾರ್ಥಿಗಳು ಪ್ರಾರ್ಥನೆ ಗೀತೆ ಹಾಡಿದರು. ಮಯೂರ ಕೊಡಬಾಗಿ ಸ್ವಾಗತಿಸಿದರು. ಸಿದ್ದಪ್ಪ ವಂದಿಸಿದರು. ಸಂತೋಷ ಬಿರಾದಾರ ನಿರೂಪಿಸಿದರು. ಈ ಸಂದರ್ಭದಲ್ಲಿ ಸಮಸ್ತ ಶಿಕ್ಷಕ/ಕಿಯರು, ಸಿಬ್ಬಂದಿ ವರ್ಗದವರು, ಪ್ರಶಿಕ್ಷಣಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ವಾರ್ತಾ ಇಲಾಖೆಯ ಮಾಹಿತಿ ಪ್ರದರ್ಶನ ಮಳಿಗೆಗೆ ಚಾಲನೆ

❑ ನೈಜ್ಯ ದೆಸೆ ನ್ಯೂಸ್



ರಾಯಚೂರು ಜನವರಿ 28 (ಕರ್ನಾಟಕ ವಾರ್ತೆ): ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಮಾಹಿತಿ ಪ್ರದರ್ಶನ ಮಳಿಗೆಗೆ ರಾಯಚೂರು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಚಾಲನೆ ನೀಡಿದರು.ಲಿಂಗಸೂರು ಕೇಂದ್ರ ಬಸ್ ನಿಲ್ದಾಣದಲ್ಲಿ ಜನವರಿ 28ರಂದು ನಡೆದ ಕಾರ್ಯಕ್ರಮದಲ್ಲಿ ರಿಬ್ಬನ್ ಕತ್ತರಿಸುವ ಮೂಲಕ ಮಳಿಗೆಯನ್ನು ಉದ್ಘಾಟಿಸಿದರು. ಇದೆ ವೇಳೆ, ಸಾಂಪ್ರದಾಯಿಕ ಮಾದರಿಯಲ್ಲಿ ಸಿದ್ಧಪಡಿಸಿದ್ದ ದೀಪ ಪ್ರಜ್ವಲನೆ ಕಾರ್ಯಕ್ರಮದಲ್ಲಿ ದೀಪ ಬೆಳಗಿಸಿ ಮಾತನಾಡಿದ ಪಾಮಯ್ಯ ಮುರಾರಿ ಅವರು, ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ. ಎಸ್ಸಿಪಿ ಟಿಎಸ್ಪಿ ಪ್ರತಿಭಾವಂತ–ರಿಗೆ ಪ್ರೋತ್ಸಾಹ ಧನ, ಲೀಡ್ಕರ್ ಅನುಷ್ಠಾನ ಕಾರ್ಯಕ್ರಮ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ವಿವಿಧ ನಿಗಮಗಳ ಅನುಷ್ಠಾನ ಸೇ–ರಿದಂತೆ ನಾನಾ ಕಾರ್ಯಕ್ರಮಗಳನ್ನು ರಾಜ್ಯ ಸರ್ಕಾರವು ಅಚ್ಚುಕಟ್ಟಾಗಿ ಜಾರಿ ಮಾಡುತ್ತಿದೆ ಎಂದು ತಿಳಿಸಿದರು.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಪ್ರಾಸ್ತಾವಿಕ ಮಾತನಾಡಿ, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ 2025ರ ಆಗಸ್ಟ್ 16ರಂದು ನಡೆದ ಅನುಸೂಚಿತ ಜಾತಿ ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿದಂತೆ, 2025–26ನೇ ಸಾಲಿನ ಎಸ್ಸಿಪಿ ಟಿಎಸ್ಪಿ ಕ್ರಿಯಾಯೋಜನೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರಿಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತಂತೆ ರಾಜ್ಯದ ವಿವಿಧೆಡೆಯ ಆಯ್ದ ಬಸ್ ನಿಲ್ದಾಣಗಳಲ್ಲಿ ನಡೆದಂತೆ ಲಿಂಗಸೂರು ಬಸ್ ನಿಲ್ದಾಣದಲ್ಲಿ ಸಹ ಪ್ರಚಾರ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.ಜನವರಿ 30ರವರೆಗೆ ಪ್ರಚಾರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಮಾಹಿತಿ ಪ್ರದರ್ಶನ ಮಳಿಗೆಯು ಲಿಂಗಸೂರು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಜನವರಿ 28 ರಿಂದ ಜನವರಿ 30ರವರೆಗೆ ಇರುತ್ತದೆ. ಸಾರ್ವಜನಿಕರು ಜನಾಕರ್ಷಣೀಯ ಈ ಮಳಿಗೆಗೆ ಭೇಟಿ ನೀಡಿ ವಿವಿಧ ಗ್ಯಾರಂಟಿ ಯೋಜನೆಗಳು ಮತ್ತು ಎಸ್ಸಿಪಿ ಹಾಗೂ ಟಿಎಸ್ಪಿ ಯೋಜನೆಗಳ ಅನುಷ್ಠಾನದ ಯಶೋಗಾಥ–'ಯ ಚಿತ್ರಣವನ್ನು ವೀಕ್ಷಣೆ ಮಾಡಬಹುದಾಗಿದೆ ಎಂದು ಇದೆ ವೇಳೆ ಗವಿಸಿದ್ದಪ್ಪ ಅವರು ಲಿಂಗಸೂರು ತಾಲೂಕಿನ ಜನತೆಯಲ್ಲಿ ಮನವಿ ಮಾಡಿದರು.ಫೆ.1ರಿಂದ ದೇವದುರ್ಗದಲ್ಲಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಈ ಮಾಹಿತಿ ಪ್ರದರ್ಶನ ಮಳಿಗೆಯು ಫೆ.1ರಿಂದ ಫೆ.3ರವರೆಗೆ ದೇವದುರ್ಗ ಪಟ್ಟಣದ ಕೇಂದ್ರ ಬಸ್ ನಿಲ್ದಾಣದಲ್ಲಿ ಅಳವಡಿಸಲಾಗುವುದು ಎಂದು ಗವಿಸಿದ್ದಪ್ಪ ಅವರು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಭೂಪನಗೌಡ ಕರಡಕಲ್, ಟಿಎಪಿಸಿ–ಎಂಎಸ್‌ನ ಅಧ್ಯಕ್ಷರಾದ ಶಶಿಧರ ಪಾಟೀಲ, ಲಿಂಗಸೂರ ಕೇಂದ್ರ ಬಸ್ ನಿಲ್ದಾಣದ ಸಂಚಾರಿ ನಿಯಂತ್ರಕರಾದ ಸಂಗಪ್ಪ, ಸಾರಿಗೆ ನಿಯಂತ್ರಕರಾದ ಮೆಹಬೂಬಿ, ಬಸವಂತಪ್ಪ, ಅಮರಪ್ಪ, ಬಸಣ್ಣ ಸೇರಿದಂತೆ ಸಾರ್ವಜನಿಕರು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಇತರರು ಇದ್ದರು.

